MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 292 | ಶನಿವಾರ :06-09-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 292 | SATURDAY : 06-09-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಶಿಕ್ಷಕ-ವಿದ್ಯಾರ್ಥಿ ನಡುವಿನ ಸಂಬಂಧ ಗಟ್ಟಿಗೊಳ್ಳಲಿ



**ಕಲಬುರಗಿ,ಸೆ.5–** ಹಿಂದಿನ ಕಾಲದಲ್ಲಿ ವಿದ್ಯಾರ್ಥಿಗಳು ಶಿಕ್ಷಕರ ಬಗ್ಗೆ ಅಪಾರವಾದ ಗೌರವ, ಭಕ್ತಿ, ಶ್ರದ್ಧೆಯಿತ್ತು. ಆಧುನೀಕರಣಕ್ಕೆ ಒಳಗಾಗಿ ಪ್ರಸ್ತುತ ಸನ್ನಿವೇಶಗಳಲ್ಲಿ ಶಿಕ್ಷಕ-ವಿದ್ಯಾರ್ಥಿ ನಡುವಿನ ಸಂಬಂಧ ಸಡಿಲವಾಗುತ್ತಿರುವುದಕ್ಕೆ ವಿಷಾದ ವ್ಯಕ್ತಪಡಿಸಿದ ಉಪನ್ಯಾಸಕ ಎಚ್.ಬಿ.ಪಾಟೀಲ್, ಇಂದು ಗುರು-ಶಿಷ್ಯರ ಸಂಬಂಧವಾಗಿದ್ದು ಗಟ್ಟಿಗೊಳ್ಳಬೇಕಾಗಿದೆ ಎಂದು ಆಶಯ ವ್ಯಕ್ತಪಡಿಸಿದರು.

ನಗರದ ಆಳಂದ ರಸ್ತೆಯ ಖಾದ್ರಿ ಚೌಕ್‌ನಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಶುಕ್ರವಾರ ಏರ್ಪಡಿಸಿದ್ದ '63ನೇ ರಾಷ್ಟ್ರೀಯ ಶಿಕ್ಷಕರ ದಿನಾಚರಣೆ'ಯ ಕಾರ್ಯಕ್ರಮವನ್ನು ಡಾ.ಸರ್ವೆಪಲ್ಲಿ ರಾಧಾಕೃಷ್ಣನ್‌ರ ಭಾವಚಿತ್ರಕ್ಕೆ ಪುಷ್ಪ ನಮನಗಳನ್ನು ಸಲ್ಲಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಶಿಕ್ಷಕ ವೃತ್ತಿ ಪವಿತ್ರವಾದದ್ದು. ಶಿಕ್ಷಕರಿಗೆ ನಿವೃತ್ತಿಯಿಲ್ಲ. ವಿದ್ಯಾರ್ಥಿಗಳಿಗೆ ಜ್ಞಾನ, ಬುದ್ಧಿ, ಕೌಶಲಗಳನ್ನು ನೀಡಿ, ಅವರ ಭವಿಷ್ಯವನ್ನು ನಿರ್ಮಿಸುವ ಶಿಲ್ಪಿಗಳು ಶಿಕ್ಷಕರಾಗಿದ್ದಾರೆ.

## ರಾಷ್ಟ್ರೀಯ ಲೋಕ ಅದಾಲತ್ : ಪೂರ್ವಭಾವಿ ಸಭೆ



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಸೆ.5–**ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಸೆ.9ರಂದು ನಡೆಯಲಿರುವ ರಾಷ್ಟ್ರೀಯ ಲೋಕ ಅದಾಲತ್ ನಿಮಿತ್ಯ ಇಲ್ಲಿನ ನ್ಯಾಯಾಲಯದಲ್ಲಿ ಬುಧವಾರ ಸಂಜೆ ಪೂರ್ವಭಾವಿ ಸಭೆ ನಡೆಯಿತು.

ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶೆ ಮಂಜುಳಾ ಉಂಡಿ, ಪ್ರಧಾನ ಸಿವಿಲ್ ನ್ಯಾಯಾಧೀಶ ಅಂಬಣ್ಣ ಕೆ. ನೇತೃತ್ವದ ಸಭೆಯಲ್ಲಿ ಲೋಕ ಅದಾಲತ್‌ನಲ್ಲಿ ರಾಜಿ ಸಂಧಾನ ಮಾಡುವ ಪ್ರಕರಣಗಳು ಹಾಗೂ ಕಕ್ಷಿದಾರರಿಗೆ ಕಾನೂನು ಅರಿವು ನೆರವು ತಿಳಿಹೇಳುವುದು.

ಗ್ರಾಮೀಣ ಮಟ್ಟದಲ್ಲಿ ಕಾನೂನು ತಿಳುವಳಿಕೆ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ವಕೀಲರ ಸಂಘದ ಅಧ್ಯಕ್ಷ ಭೂಪನಗೌಡ ಕರಡಕಲ್, ಕಾರ್ಯದರ್ಶಿ ಬಾಲರಾಜ ಸಾಗರ, ಎಪಿಪಿ ವಿರುಪಣ್ಣ ಧುಮತಿ, ಮದೆಬೂಬ, ಚಂದ್ರಶೇಖರ ದಟ್ಟಿ, ಸುಜಾತ, ಮದಾರುದ್ರಪ್ಪ ಧರ್ಮಪ್ಪ ಪಿಎಸ್ಐ, ಆರಿಫ್ ಉನ್ನಿಸಾ ಬೇಗಂ ಮುದಗಲ್, ಗದ್ದೆಪ್ಪ ದನುಮಂತಪ್ಪ ಮೌನೇಶ ಸೇರಿ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಮತಪತ್ರ: ಕೈ-ಕಮಲ ಜಟಾಪಟಿ





**ಬೆಂಗಳೂರು,ಸೆ.5–**ರಾಜ್ಯದಲ್ಲಿ ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ವಿದ್ಯುನ್ಮಾನ ಮತಯಂತ್ರದ (ಇವಿಎಂ) ಬದಲು ಮತಪತ್ರ (ಬ್ಯಾಲೆಟ್ ಪೇಪರ್) ಬಳಸಲು ರಾಜ್ಯಸರ್ಕಾರ ನಿರ್ಧಾರ ಪರ ವಿರೋಧ ಚರ್ಚೆಗೆ ಕಾರಣವಾಗಿದ್ದು, ಬಿಜೆಪಿ ಮತಪತ್ರ ಬಳಕೆಗೆ ವಿರೋಧ ವ್ಯಕ್ತಪಡಿಸಿದ್ದರೆ. ಕಾಂಗ್ರೆಸ್ ಪಕ್ಷ ಮತಪತ್ರ ಬಳಸುವುದನ್ನು ಸಮರ್ಥಿಸಿಕೊಂಡು ಕಾನೂನಿನಲ್ಲೇ ಇದಕ್ಕೆ ಅವಕಾಶವಿದೆ ಎಂದಿದೆ.

ಸ್ಥಳೀಯ ಸಂಸ್ಥೆಗಳಲ್ಲಿ ಮತಪತ್ರ ಬಳಸುವ ಸರ್ಕಾರದ ತೀರ್ಮಾನ ಬಿಜೆಪಿ-ಕಾಂಗ್ರೆಸ್ ನಡುವೆ ಆರೋಪ-ಪ್ರತ್ಯಾರೋಪಗಳಿಗೂ ಕಾರಣವಾಗಿರುವಾಗಲೇ ರಾಜ್ಯ ಚುನಾವಣಾ ಆಯೋಗ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ವಿದ್ಯುನ್ಮಾನ ಮತಯಂತ್ರದ ಬದಲು ಇವಿಎಂ ಬಳಸಲು ನಾವು ಸಿದ್ಧರಿದ್ದೇವೆ. ಈಗಿರುವ ಕೆಲ ನಿಯಮಗಳಿಗೆ ರಾಜ್ಯಸರ್ಕಾರ ತಿದ್ದುಪಡಿ ಮಾಡಿದರೆ ಮತಪತ್ರಗಳ ಮೂಲಕವೇ ಚುನಾವಣೆ ನಡೆಸಲು ಅಗತ್ಯ ಕ್ರಮಕೈಗೊಳ್ಳುತ್ತೇವೆ ಎಂದು ಹೇಳಿದೆ.

**ಬಿಜೆಪಿ ವಿರೋಧ**

ಸ್ಥಳೀಯ ಸಂಸ್ಥೆಗಳ ಚುನಾವಣೆಯ ಲ್ಲಿ ಇವಿಎಂ ಬದಲು ಮತಪತ್ರ ಬಳಸುವ ಸರ್ಕಾರದ ತೀರ್ಮಾನವನ್ನು ರಾಜ್ಯ ಬಿಜೆಪಿ ವಿರೋಧಿಸಿದ್ದು, **(2ನೇಪುಟಕ್ಕೆ)**

### ಈದ್ ಮಿಲಾದ್ ಪ್ರಯುಕ್ತ 150ಕ್ಕೂ ಹೆಚ್ಚು ಯುವಕರ ರಕ್ತದಾನ

## ರಕ್ತಕ್ಕೆ ಜಾತಿ ಬೇಧವಿಲ್ಲ. ಇದು ಶ್ರೇಷ್ಠ ದಾನ : ಶರಣಗೌಡ ಬಯ್ಯಾಪೂರ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಸೆ.5–** ದಾನದಲ್ಲಿಯೇ ಶ್ರೇಷ್ಠ ಎಂದರೆ ರಕ್ತದಾನ ಮಾಡುವುದು, ರಕ್ತದಲ್ಲಿ ಯಾವುದೇ ಜಾತಿ, ಮತ ಬೇಧವಿಲ್ಲ. ಯಾರು ಯಾರಿಗೆ ಬೇಕಾದರೂ ರಕ್ತ ದಾನ ಮಾಡಬಹುದು. ದೇವರು ಮಾಡಿದ ಕಾನೂನಿನಲ್ಲಿ ಜಾತಿ ಮತವಿಲ್ಲ ಎಂದಾದರೆ, ನಾವೇಕೆ ಬೇಧ ಮಾಡಬೇಕು. ಎಲ್ಲರೂ ಒಗ್ಗಟ್ಟಾಗಿ ಸಹೋದರತ್ವ ಮೆರೆಯಬೇಕು ಎಂದು ವಿಧಾನ ಪರಿಷತ್ ಸದಸ್ಯ ಶರಣ ಗೌಡ ಪಾಟೀಲ್ ಕರೆ ನೀಡಿದರು.



ಈದ್ ಮಿಲಾದ್ ಹಬ್ಬದ ಪ್ರಯುಕ್ತ ಇಲ್ಲಿನ ಸಂತೆಬಜಾರ್ ಏರಿಯಾದಲ್ಲಿ ಶುಕ್ರವಾರ ಆಯೋಜಿಸಿದ್ದ ಉಚಿತ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ರಕ್ತ ಯಾವುದೇ ಕೆಮಿಕಲ್‌ನಿಂದ ಸಿದ್ಧವಾಗುವುದಿಲ್ಲ. ಇದು ಕೇವಲ ಮನುಷ್ಯರಿಂದ ಮಾತ್ರ ಸಂಗ್ರಹಿಸಲು ಸಾಧ್ಯ. ರಕ್ತದಾನದಿಂದ ಹಲವು ಜೀವ, ಜೀವನಗಳನ್ನು ಉಳಿಸುವ ಪುಣ್ಯ ದೊರೆಯುತ್ತದೆ. ಶ್ರೇಷ್ಠ ಸಂತರ ಜನ್ಮದಿನದಂದು ಹಮ್ಮಿಕೊಂಡಿರುವ ಈ ಕಾರ್ಯ ಶ್ಲಾಘನೀಯ. ಹೆಚ್ಚಿನ ಸಂಖ್ಯೆಯಲ್ಲಿ ಯುವಕರು ಪಾಲ್ಗೊಳ್ಳಬೇಕು ಎಂದು ಹೇಳಿದರು.

**150ಕ್ಕೂ ಹೆಚ್ಚು ದಾನಿಗಳು :** ರಕ್ತದಾನ ಶಿಬಿರದಲ್ಲಿ ಸ್ವಯಂ ಪ್ರೇರಿತರಾಗಿ 150ಕ್ಕೂ ಹೆಚ್ಚು ಯುವಕರು ಪಾಲ್ಗೊಳ್ಳುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಸಂಗ್ರಹಿಸಿದ ರಕ್ತವನ್ನು ರಾಯಚೂರು ರಿಮ್ಸ್ ಆಸ್ಪತ್ರೆ ಮತ್ತು ಹಟ್ಟಿ ಚಿನ್ನದಗಣಿ ಆಸ್ಪತ್ರೆಗೆ ರವಾನಿಸಲಾಯಿತು.

ಈದ್ ಮಿಲಾದ್ ಕಮೀಟಿ ವತಿಯಿಂದ ಆಯೋಜಿಸಿದ್ದ ಶಿಬಿರದಲ್ಲಿ ರಿಮ್ಸ್ ಆಸ್ಪತ್ರೆಯ ಡಾ.ಶಿವಕುಮಾರ, ಡಾ.ಶಿಲ್ಪಿ, ಆಯೋಜಕರಾದ ಸಲೀಂಪಾಷಾ, ಹುಸೇನ್‌ಬಾಷಾ, ಬಾಬಾ ಚಾನಿ, ಇಸ್ಮಾಯಿಲ್, ಅನಿಸ್‌ಪಾಷಾ, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಪಾಮಯ್ಯ ಮುರಾರಿ, ನಗರ ಯೋಜನಾ ಪ್ರಾಧಿಕಾರ ಅಧ್ಯಕ್ಷ ಭೂಪನ ಗೌಡ ಕರಡಕಲ್, ಮುಖಂಡರಾದ ಡಿ.ಜಿ.ಗುರಿಕಾರ, ಗುಂಡಪ್ಪನಾಯಕ, ಇಬ್ರಾ ಹಿಂ ಗ್ಯಾರಂಟಿ, ಡಾ.ನಾಗನಗೌಡ ಬಯ್ಯಾ ಪೂರ, ಚೆನ್ನಾರೆಡ್ಡಿ ಬಿರಾದಾರ ಸೇರಿ ಇತರ ರು ಇದ್ದರು.

## ಈದ್ ಮಿಲಾದ್ ಹಬ್ಬ ಕೋಮು ಸೌಹಾರ್ದತೆಯ ಸಂಕೇತ : ಎನ್.ಎಸ್.ಬೋಸರಾಜು

**ಯುವ ಮಾರ್ಗ ಸುದ್ದಿ**

**ಮಾನ್ವಿ,ಸೆ.5–**ಮುಸ್ಲೀಂ ಸಮಾಜದ ಪವಿತ್ರ ಈದ್ ಮಿಲಾದ್ ಹಬ್ಬ ಕೋಮು ಸೌಹಾರ್ದತೆಯ ಸಂಕೇತವಾಗಿದ್ದು ನಾವೆಲ್ಲರು ಜಾತಿ-ಮತ-ಧರ್ಮಗಳನ್ನು ಬದಿಗಿಟ್ಟು ಹಬ್ಬ ಹರಿದಿನಗಳನ್ನು ಒಂದಾಗಿ ಆಚರಿಸಬೇಕು ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್.ಎಸ್ ಬೋಸರಾಜು ಅವರು ತಿಳಿಸಿ ಮುಸ್ಲೀಂ ಬಂದುಗಳಿಗೆ ಪರಸ್ಪರ ಶುಭಕೋರಿದರು.

ಪಟ್ಟಣದ ಪ್ರವಾಸಿ ಮಂದಿರದ ಮುಂಭಾಗದಲ್ಲಿ ಈದ್ ಮಿಲಾದ್ ಹಬ್ಬದ ನಿಮಿತ್ಯ ಆಯೋಜಿಸಿದ್ದ ಆರಾಧನಾ ಮೆರವಣಿಗೆಯಲ್ಲಿ ಭಾಗವಹಿಸಿ ಮಾತನಾಡಿದರು.

ಮೊದಲಿನಿಂದಲೂ ನಾವೆಲ್ಲರು ಸಹೋದರರಂತೆ ಬಾಳುತ್ತಿದ್ದೇವೆ. ದೇಶದ ಎಲ್ಲಾ ಮಹಾನ್ ದಾರ್ಶನಿಕರು ಶಾಂತಿ, ಸೌಹಾರ್ದತೆ ಸಂದೇಶವನ್ನು ನಾಡಿಗೆ ಸಾರಿದ್ದಾರೆ. ಅವರ ಆಶಯದಂತೆ ನಮ್ಮ ಧರ್ಮವನ್ನು ಪ್ರೀತಿಸುವ ಜೊತೆಗೆ ಇತರೆ ಧರ್ಮವನ್ನು



ಗೌರವಿಸುವ ಮೂಲಕ ಸೌಹಾರ್ದತೆ ಯಿಂದ ಬದುಕಬೇಕು ಎಂದು ತಿಳಿಸಿ ದರು.

ನಂತರ ಶಾಸಕರಾದ ಹಂಪಯ್ಯ ನಾಯಕ ಮಾತನಾಡಿ, ನಮ್ಮೆಲ್ಲರದು ಒಂದೆ ರಕ್ತ, ಒಂದೇ ಭೂಮಿ ಯಲ್ಲಿ ಬೆಳದ ಅನ್ನವನ್ನು ಊಟ ಮಾಡುತ್ತಿದ್ದೇವೆ ಅಂದ ಮೇಲೆ ಮನುಕುಲಕ್ಕೆ ಜಾತಿ, ಧರ್ಮದ ಬೇದವಿಲ್ಲ. ಮೊದಲಿನಿಂದಲೂ ಹಿಂದು, ಮುಸ್ಲೀಂ, ಕ್ರೈಸ್ತರೆಲ್ಲರು ಸ್ನೇಹಿತರಾಗಿ ಸಹೋದರರಂತೆ ಬೆಳದಿದ್ದೇವೆ. ನಮ್ಮಲ್ಲಿ ಯಾವುದೇ ಬೇಧಬಾವವಿಲ್ಲ ಎಂದು ಈದ್ ಮಿಲಾದ್ ಹಬ್ಬಕ್ಕೆ ಶುಭಕೋರಿ ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರು, ಮಾನ್ವಿ ಬ್ಲಾಕ್ ಕಾಂಗ್ರೆಸ್ ಅದ್ಯಕ್ಷರಾದ ಗಫೂರ್ ಸಾಬ್, ರಾಜಾ ಸುಭಾಷ್ ಚಂದ್ರ ನಾಯಕ, ರೌಡೂರ್ ಮಹಾಂತೇಶ ಸ್ವಾಮಿ, ಖಾಲೀದ್ ಗುರು, ಜಯಪ್ರಕಾಶ್, ಇದಾಯತ್, ಅಬ್ದುಲ್ ಭಾಷಾ, ಶರಣಯ್ಯ, ಹುಸೇನ್ ಪಾಷಾ ಕೊಡ್ಲಿ, ರಸೂಲ್ ಖುರೇಶಿ, ಸತ್ತರ್ ಬಂಗ್ಲೇವಾಲೆ, ಇಸ್ಮೈಲ್ ಮಾಡಗಿರಿ, ಜಾಫರ್, ಮೊಹ್ಮದ್ ಪಾಷಾ, ಹಂಪಯ್ಯ ನಾಯಕ, ಕಾಮೇಶ್, ರೇಣುಕಾ ರಡ್ಡಿ ಸೇರಿದಂತೆ ಅನೇಕರಿದ್ದರು.

## ದಸರಾ ಮಹೋತ್ಸವಕ್ಕೆ ಸಚಿವರಿಗೆ ಕಲ್ಮಠದ ಶ್ರೀಗಳಿಂದ ಆಹ್ವಾನ

**ಯುವ ಮಾರ್ಗ ಸುದ್ದಿ**

**ರಾಯಚೂರು,ಸೆ.5–**ಮಾನ್ವಿಯ ಕಲ್ಮಠದಲ್ಲಿ ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 1 ರವರೆಗೆ ನಡೆಯಲಿರುವ ದೇವಿ ಪುರಾಣ ಹಾಗೂ ದಸರಾ ಮಹೋತ್ಸವಕ್ಕೆ ವಿವಿಧ ಸಚಿವರನ್ನು ಆಹ್ವಾನಿಸಲಾಗಿದೆ. ಕಲ್ಮಠದ ವಿರೂಪಾಕ್ಷ ಪಂಡಿತಾರಾಧ್ಯ ಮಹಾಸ್ವಾಮಿಗಳು ಸಚಿವರಾದ ಎನ್.ಎಸ್. ಬೋಸರಾಜು, ಶರಣಪ್ರಕಾಶ್ ಪಾಟೀಲ ಹಾಗೂ ಈಶ್ವರ್ ಖಂಡ್ರೆ ಅವರನ್ನು ಭೇಟಿ ಮಾಡಿ, ಈ ಮಹೋತ್ಸವಕ್ಕೆ ಅಧಿಕೃತವಾಗಿ ಆಹ್ವಾನಿಸಿದರು.

ಬೆಂಗಳೂರಿನ ವಿಕಾಸಸೌಧದಲ್ಲಿ ನಡೆದ ಈ ಭೇಟಿಯಲ್ಲಿ, ವಿರೂಪಾಕ್ಷ ಪಂಡಿತಾರಾಧ್ಯ ಮಹಾಸ್ವಾಮಿಗಳು ಮೊದಲು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಬೋಸ



ರಾಜು ಅವರನ್ನು ಭೇಟಿಯಾಗಿ ಆಹ್ವಾನ ಪತ್ರ ನೀಡಿದರು. ನಂತರ, ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಪ್ರಕಾಶ್ ಪಾಟೀಲ ಮತ್ತು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರಾದ ಈಶ್ವರ್ ಖಂಡ್ರೆ ಅವರನ್ನು ಭೇಟಿಯಾಗಿ, ಮಹೋತ್ಸವದಲ್ಲಿ ಭಾಗವಹಿಸುವಂತೆ ಕೋರಿದರು.

ಈ ಸಂದರ್ಭದಲ್ಲಿ ನೀಲಗಲ್ ಮಠದ ರೇಣುಕಾ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು, ಮಂಗಳವಾರಪೇಟೆ ಮಠದ ವೀರ ಸಂಗಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಚಂದ್ರಶೇಖರ್ ಮಿರ್ಜಾಪೂರ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ಅರಕೇರಾದಲ್ಲಿ ಈದ್ ಮಿಲಾದ್ ಅದ್ದೂರಿ ಆಚರಣೆ

**ಯುವ ಮಾರ್ಗ ಸುದ್ದಿ**

**ಅರಕೇರಾ,ಸೆ.5–** ಪ್ರವಾದಿ ಮಹಮ್ಮದ್ ಪೈಗಂಬರ್‌ಜನ್ಮದಿನದ ಪ್ರಯುಕ್ತ ಶಾಂತಿ, ಸೌಹಾರ್ದತೆಯ ಪ್ರತೀಕವಾಗಿರುವಈದ್ ಮಿಲಾದ್ ಹಬ್ಬವನ್ನುತಾಲೂಕಿನಾದ್ಯಂತ ಮುಸ್ಲಿಮರು ಸಡಗರ ಸಂಭ್ರಮದಿಂದ ಶುಕ್ರವಾರ ಆಚರಿಸಿದರು.

ಪಟ್ಟಣದ ವಿವಿಧೆಡೆ ಹಸಿರು ಧ್ವಜಗಳು, ಬಾವುಟಗಳು ಹಾರಾಡಿದವು.ಮುಸ್ಲಿಮರು ಮೆರವಣಿಗೆಯಲ್ಲಿ ಪೈಗಂಬರರಕುರಿತು ಗುಣಗಾನ ಮಾಡಿದರು.ಮಕ್ಕಳು ಬಣ್ಣ, ಬಣ್ಣದ ಉಡುಪು ಧರಿಸಿ ಸಂಭ್ರಮಿಸಿದರು. ಮೆರವಣಿಗೆಯಲ್ಲಿ ಮೆಕ್ಕಾ, ಮದೀನಾ ಗುಂಬಜ್ ಗಮನ ಸೆಳೆದವು. ಹಿರಿಯ



ರಯ, ಕಿರಿಯರು ಎನ್ನದೆ ಸಂಭ್ರಮ, ಸಡಗರಗಳಿಂದ ಭಾಗವಹಿಸಿದ್ದರು. ಮೆರವಣಿಗೆ ಹೋಕರಿಗೆಪಾನಕ, ಸಿಹಿ ಹಾಗೂ ಹಣ್ಣುಗಳ ವಿತರಣೆಕಾರ್ಯ ನಡೆಯಿತು.

ಪ್ರಮುಖರಾದ ಅಲೀಂ ಜಾನಿ,ಹುಸೇನ್ ಭಾಷ ಆಫಿಸಾಬ, ಭಾಷಾ ಸಾಬ ವೆಲ್ಡಿಂಗ್, ಇಬ್ರಾಹೀಂ ಹಟ್ಟಿ, ಕರೀಂ ಸಾಬ, ಮಹಿಮೂದ್, ಸುಲ್ತಾನ ಬಡಿಗೇರ್,ಅಬ್ದುಲ್ ಖಾಸೀಂ ಟೈಲರ್, ಅಬ್ದುಲ್ ರಜಾಕ್, ರೌಫ್, ಸೋಫಿಸಾಬ ಇತರರಿದ್ದರು.

ಮೊದಲನೇಯ ಪುಟದಿಂದ

# ಮತಪತ್ರ: ಕೈ–ಕಮಲ ಜಟಾಪಟಿ

ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಪಾರದರ್ಶಕ ಚುನಾವಣೆಯಲ್ಲಿ ಧಿಕ್ಕರಿಸುವುದೇ ಕಾಂಗ್ರೆಸ್‌ನ ಕಾರ್ಯಸೂಚಿ ಹಾಗೂ ಗುರಿಯಾಗಿದೆ ಎಂದು ಟೀಕಿಸಿದೆ.ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ ವಿಜಯೇಂದ್ರ ಅವರು, ಮತ ಪತ್ರಗಳ ಬಳಕೆಯಿಂದ ಚುನಾವಣಾ ಅಕ್ರಮವೆಸಗಬಹುದು. ಮತಗಟ್ಟೆಗಳಲ್ಲಿ ದೌರ್ಜನ್ಯ ಮೆರೆಯಬಹುದು, ಎಗ್ಗಿಲ್ಲದೆ ಕಳ್ಳ ಮತದಾನವನ್ನು ಮಾಡಬಹುದು ಎಂಬ ಏಕೈಕ ಕಾರಣಕ್ಕೆ ಕಾಂಗ್ರೆಸ್ ಮತಪತ್ರ ಆಧರಿಸಿದ ಚುನಾವಣೆಯನ್ನು ರಾಹುಲ್‌ಗಾಂಧಿ ನೇತೃತ್ವದಲ್ಲಿ ಬೆಂಬಲಿಸುತ್ತಿದೆ ಎಂದು ವಾಗ್ದಾಳಿನಡೆಸಿದ್ದಾರೆ.

ಮುಂದಿನ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಯಂತ್ರ ಬದಿಗಿಟ್ಟು ಮತಪತ್ರ ಬಳಕೆಗೆ ನಿರ್ಧರಿಸಿರುವ ಸರ್ಕಾರದ ತೀರ್ಮಾನ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿರುವುದೇ ಮತಗಳ್ಳತನದಿಂದ ಎಂದು ಸ್ವಯಂ ಪ್ರಮಾಣೀಕರಿಸಿಕೊಂಡಂತಿದೆ ಎಂದು ಅವರು ಟೀಕಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಇವಿಎಂ ಮತಯಂತ್ರ ಬಳಸಿ ರಾಜ್ಯದಲ್ಲಿ 2023ರ ವಿಧಾನಸಭಾ ಚುನಾವಣೆಯಲ್ಲಿ ಗೆದ್ದು ಬಂದಿರುವ ಕಾಂಗ್ರೆಸ್, 136 ಶಾಸಕರಿಂದ ಹಾಗೂ 9 ಕಾಂಗ್ರೆಸ್ ಲೋಕಸಭಾ ಸದಸ್ಯರಿಂದ ರಾಜೀನಾಮೆ ಕೊಡಿಸಲಿ. ಮತಪತ್ರ ಬಳಸಿ ಮತ್ತೆ ಚುನಾವಣೆಯಲ್ಲಿ ಗೆದ್ದು ಬರಲಿ, ಇಲ್ಲದಿದ್ದರೆ ಮತಗಳ್ಳತನದಿಂದ ನಾವು ಆಯ್ಕೆಯಾಗಿ ಅಧಿಕಾರಕ್ಕೆ ಬಂದಿರುವುದು ಎಂದು ಒಪ್ಪಿಕೊಳ್ಳಲಿ ಎಂದೂ ವಿಜಯೇಂದ್ರ ಟ್ವೀಟ್‌ನಲ್ಲಿ ಒತ್ತಾಯಿಸಿದ್ದಾರೆ.

ದೇಶದಲ್ಲಿ ಅತೀ ಹೆಚ್ಚು ಅಕ್ರಮ ಮತದಾನ ಮತಗಳ್ಳತನದ ದೂರುಗಳು, ಚುನಾವಣಾ ದೌರ್ಜನ್ಯದ ಘಟನೆಗಳು, ಚುನಾವಣಾ ಅಕ್ರಮದ ಬಗ್ಗೆ ನ್ಯಾಯಾಲಯಗಳಲ್ಲಿ ಅತೀ ಹೆಚ್ಚು ದೂರು ದಾಖಲಾಗಿದ್ದರೆ ಅದು ಮತಪತ್ರ ಆಧರಿಸಿ ನಡೆದ ಚುನಾವಣೆಗಳಲ್ಲಿ ಅದು ಕಾಂಗ್ರೆಸ್ಸಿಗರ ಮೇಲೆ ಹೆಚ್ಚು ಎಂಬುದನ್ನು ಕಾಂಗ್ರೆಸ್ಸಿಗರು ಇತಿಹಾಸದ ಪುಟಗಳನ್ನು ತೆರೆದು ನೋಡಲಿ ಎಂದು ಅವರು ಹೇಳಿದ್ದಾರೆ.

ಇಂದಿರಾಗಾಂಧಿ ಅವರು ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಲು ಕಾರಣವಾಗಿದ್ದು, ಅವರು ನಡೆಸಿದ ಮತಗಳ್ಳತನ ಹಾಗೂ ಅಕ್ರಮ ಚುನಾವಣೆ ಹಿನ್ನೆಲೆಯಲ್ಲಿ ನ್ಯಾಯಾಲಯ ನೀಡಿದ ತೀರ್ಪಿನಿಂದ ಎಂಬ ಇತಿಹಾಸವನ್ನು ದೇಶದ ಜನ ಮರೆತ್ತಿಲ್ಲ ಎಂದು ವಿಜಯೇಂದ್ರ ತಿಳಿಸಿದ್ದಾರೆ.

ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದ ಅವಧಿಯಲ್ಲಿ ಮತಪತ್ರ ಬಳಸಿ ನಡೆದ ಚುನಾವಣೆಗಳಲ್ಲಿ ಎಷ್ಟು ಅಕ್ರಮ ನಡೆದಿದೆ ಎಂಬುದಕ್ಕೆ ಇವತ್ತೂ ದಾಖಲೆಗಳಿವೆ. 1990ರ ದಶಕದಲ್ಲಿ ದಾವಣಗೆರೆಯಲ್ಲಿ ಲೋಕಸಭಾ ಚುನಾವಣೆಯಲ್ಲಿ ಜಯಗಳಿಸಿದ್ದ ಬಿಜೆಪಿ ಅಭ್ಯರ್ಥಿಯನ್ನು ಮರು ಎಣಿಕೆಯಲ್ಲಿ ಸೋಲಿಸಿ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಲಾಯಿತು. ಬಿಜೆಪಿ ಅಭ್ಯರ್ಥಿಯ ಮತಪತ್ರಗಳನ್ನು ಹೇಗೆ ತಿರಸ್ಕೃತಗೊಳಿಸಲಾಯಿತು ಎಂಬುದಕ್ಕೆ ಅಂದು ದಾವಣಗೆರೆಯ ಮತ ಎಣಿಕೆ ಕೇಂದ್ರಗಳಲ್ಲಿ ಶೌಚಾಲಯಗಳಲ್ಲಿ ಬಿಜೆಪಿ ಅಭ್ಯರ್ಥಿಯ ಮತಪತ್ರಗಳು ಚೆಲ್ಲಾಡಿರುವುದನ್ನು ಮಾಧ್ಯಮಗಳು ವರದಿ ಮಾಡಿದ್ದವು ಎಂದು ಅವರು ತಿಳಿಸಿದ್ದಾರೆ.

ಮತಪತ್ರ ಆಧರಿಸಿದ ಚುನಾವಣೆಗಳಲ್ಲಿ ಅಕ್ರಮ ಹಾಗೂ ಮತಗಳ್ಳತನ ನಡೆಸುವುದರಲ್ಲಿ ನಿಷ್ಣಾತರಾದ ಕಾಂಗ್ರೆಸ್ಸಿಗರು ಚುನಾವಣೆಗಳ ನಿರಂತರ ಸೋಲುಗಳಿಂದ ಮೂಲೆಗುಂಪಾಗುತ್ತಿರುವ ಪರಿಸ್ಥಿತಿಯಿಂದ ಕೆಂಗೆಟ್ಟು ಹೋಗಿದ್ದಾರೆ.

ಈ ಕಾರಣದಿಂದ ಆಧಾರರಹಿತ ಅಪ್ರಬುದ್ಧ,ವಿತ್ತಂಡ ವಾದವನ್ನು ಮುಂದಿಟ್ಟುಕೊಂಡು ರಾಹುಲ್‌ಗಾಂಧಿಯವರು ಮತಗಳ್ಳತನದ ಹೆಸರಿನಲ್ಲಿ ಬಾಲಿಶ ವಿವಾದ ಹುಟ್ಟುಹಾಕಲು ಹೊರಟ್ಟಿದ್ದಾರೆ. ಇದನ್ನು ಬೆಂಬಲಿಸಲು ರಾಜ್ಯದ ಕಾಂಗ್ರೆಸ್ ಸರ್ಕಾರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರಗಳನ್ನುಬಳಸಿ ಚುನಾವಣೆ ನಡೆಸುವುದಾಗಿ ನಿಣಯ ಕೈಗೊಂಡಿದೆ. ಇಡೀ ದೇಶ, ಜಗತ್ತು ತಂತ್ರಜ್ಞಾನವನ್ನಾಧರಿಸಿ ವೇಗವಾಗಿ ನಡೆಯುತ್ತಿದ್ದರೆ, ಕರ್ನಾಟಕದ ಕಾಂಗ್ರೆಸ್ ಸರ್ಕಾರ ತಂತ್ರಜ್ಞಾನವನ್ನು ಅಪಮಾನಿಸಿ ಹೆಬ್ಬೆಟ್ಟಿನ ದಿನಗಳನ್ನು ನೆನಪಿಸಲು ಹೊರಟಿದೆ ಎಂದು ಅವರು ದೂರಿದ್ದಾರೆ.

ಮತ ಪತ್ರ ಬಳಕೆಯಿಂದ ಚುನಾವಣಾ ಅಕ್ರಮವೆಸಗಬಹುದು ಎಂಬ ಕಾರಣಕ್ಕಾಗಿ ಕಾಂಗ್ರೆಸ್ ಮತಪತ್ರ ಆಧರಿಸಿದ ಚುನಾವಣೆಯನ್ನು ರಾಹುಲ್ ನೇತೃತ್ವದಲ್ಲಿ ಬೆಂಬಲಿಸುತ್ತಿದೆ. ಅದನ್ನು ಕರ್ನಾಟಕದ ಕಾಂಗ್ರೆಸ್ ಸರ್ಕಾರ ಜಾರಿಗೊಳಿಸಲು ಮೊದಲ ಹೆಜ್ಜೆ ಇಡಲು ಹೊರಟಿದೆ. ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಪಾರದರ್ಶಕ ಚುನಾವಣೆಯನ್ನು ಧಿಕ್ಕರಿಸುವುದೇ ಕಾಂಗ್ರೆಸ್‌ನ ಕಾರ್ಯಸೂಚಿ ಹಾಗೂ ಗುರಿಯಾಗಿದೆ ಎಂದು ಅವರು ಹರಿಹಾಯ್ದಿದ್ದಾರೆ.

ಚುನಾವಣಾ ಆಯೋಗ ಸಿದ್ಧ ; ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಬದಲಿಗೆ ಮತಪತ್ರ ಬಳಸಲು ರಾಜ್ಯ ಚುನಾವಣಾ ಆಯೋಗ ಸಿದ್ಧವಿದೆ. ಈಗಿರುವ ಕೆಲ ನಿಯಮಗಳಿಗೆ ರಾಜ್ಯಸರ್ಕಾರ ತಿದ್ದುಪಡಿ ಮಾಡಿದರೆ ಬ್ಯಾಲೆಟ್ ಪೇಪರನ್ನೇ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಬಳಸಲು ಕ್ರಮ ತೆಗೆದುಕೊಳ್ಳುತ್ತೇವೆ ಎಂದು ರಾಜ್ಯ ಚುನಾವಣಾ ಮುಖ್ಯ ಆಯುಕ್ತ ಜಿ.ಎಸ್. ಸಂಗ್ರೇಸಿ ಅವರು ಹೇಳಿದ್ದಾರೆ.

ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ರಾಜ್ಯ ಚುನಾವಣಾ ಆಯೋಗವೇ ಮತಪಟ್ಟಿಯನ್ನು ಸಿದ್ಧಪಡಿಸಲು ಅವಕಾಶವಿದೆ. ರಾಜ್ಯ ಚುನಾವಣಾ ಆಯೋಗ ಒಂದು ಸಾಂವಿಧಾನಿಕ ಹಾಗೂ ಸ್ವಾಯತ್ತ ಸಂಸ್ಥೆ ಇವಿಎಂ ಬದಲು ಮತಪತ್ರದ ಮೂಲಕ ಚುನಾವಣೆ ನಡೆಸಲು ಕಾಯ್ದೆ ನಿಯಮಗಳಿಗೆ ತಿದ್ದುಪಡಿ ಮಾಡಿದರೆ ಅದರ ಪ್ರಕಾರವೇ ನಾವು ಚುನಾವಣೆ ಮಾಡಬೇಕಾಗುತ್ತದೆ ಎಂದರು.

ವಿಧಾನಸಭೆ ಹಾಗೂ ಲೋಕಸಭಾ ಚುನಾವಣೆಯಲ್ಲಿ ತಿದ್ದುಪಡಿ ಮಾಡಬೇಕಾದರೆ ಭಾರತೀಯ ಚುನಾವಣಾ ಆಯೋಗದ ಅನುಮತಿ ಬೇಕಾಗುತ್ತದೆ. ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಭಾರತೀಯ ಚುನಾವಣಾ ಆಯೋಗದ ಅನುಮತಿ ಬೇಕಿಲ್ಲ. ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಮತಪತ್ರ ಬಳಸುವುದರಿಂದ ಮತದಾರರಿಗೆ ಗೊಂದಲವಾಗುವ ಸಾಧ್ಯತೆ ಕಡಿಮೆ.ಈ ಹಿಂದೆ ಹಲವು ಚುನಾವಣೆಗಳಲ್ಲಿ ಮತಪತ್ರ ಬಳಕೆಯಾಗಿದೆ ಎಂದರು.

ಆಪ್ ಸ್ವಾಗತ ;ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಬದಲು ಮತಪತ್ರ ಬಳಸುವ ರಾಜ್ಯಸರ್ಕಾರದ ತೀರ್ಮಾನವನ್ನು ಆಮ್ ಆದ್ಮಿ ಪಕ್ಷ ಸ್ವಾಗತಿಸಿದೆ. ಇತ್ತೀಚಿನ ಚುನಾವಣೆಗಳಲ್ಲಿ ಮತಗಳ್ಳತನವಾಗಿದೆ ಎಂದು ಇಂಡಿಯಾ ಒಕ್ಕೂಟದ ನಾಯಕರುಗಳು ಮಾಡಿರುವ ಗುರುತರ ಆರೋಪಗಳಿಗೆ ಪ್ರಧಾನಿ ಮೋದಿ ಪ್ರತಿಕ್ರಿಯೆ ನೀಡಿಲ್ಲ.

ಜತೆಗೆ ಆರೋಪಕ್ಕೆ ಒಳಗಾಗಿರುವ ಕೇಂದ್ರ ಚುನಾವಣಾ ಆಯೋಗವು ಸೂಕ್ತ ಸ್ಪಷ್ಟೀಕರಣ, ಸಮಜಾಯಿಷಿ ನೀಡದೆ ಆರೋಪ ಮಾಡಿರುವ ನಾಯಕರ ವಿರುದ್ಧವೇ ಹೇಳಿಕೆ ನೀಡಿದೆ. ಇಂತಹ ಸಂದರ್ಭದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಕೆ ಸ್ವಾಗತಾರ್ಹ ಎಂದು ಆಮ್ ಆದ್ಮಿ ಪಕ್ಷದ ರಾಜ್ಯ ಮಾಧ್ಯಮ ಸಂಚಾಲಕ ಜಗದೀಶ್. ವಿ ಸದಂ ಹೇಳಿದ್ದಾರೆ.

# ಶಿಕ್ಷಕ–ವಿದ್ಯಾರ್ಥಿ ನಡುವಿನ ಸಂಬಂಧ ಗಟ್ಟಿಗೊಳ್ಳಲಿ

ಡಾ.ಸರ್ವೇಪಲ್ಲಿ ರಾಧಾಕೃಷ್ಣನ್ ಮತ್ತು ಶಿಕ್ಷಕರ ಕೊಡುಗೆಯನ್ನು ಸ್ಮರಿಸುವ ದಿನ ಇದಾಗಿದೆ. ನೈತಿಕ ಮೌಲ್ಯಗಳ ಪ್ರೋತ್ಸಾಹ, ಸಕಾರಾತ್ಮಕ ಕಲಿಕೆಯ ವಾತಾವರಣ, ಸಮಾಜದಲ್ಲಿ ಶಿಕ್ಷಕರ ಸ್ಥಾನಮಾನದ ಅವಲೋಕನ ಮಾಡುವುದು ದಿನಾಚರಣೆಯ ಹಿನ್ನಲೆಯಾಗಿದೆ ಎಂದರು.

ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್ ಮಾತನಾಡಿ, ಸದೃಢ ರಾಷ್ಟ್ರ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಪ್ರಮುಖವಾಗಿದೆ. ಶಿಕ್ಷಕರ ಮೇಲೆ ಗುರುತರ ಜವಾಬ್ದಾರಿಯಿದ್ದು, ಅದನ್ನು ಕರ್ತವ್ಯ ಬದ್ಧತೆಯಿಂದ ಮಾಡುವ ಮೂಲಕ ಶಿಕ್ಷಕ, ಗುರುವಾಗಬೇಕಾಗಿದೆ ಎಂದು ಮಾರ್ಮಿಕವಾಗಇ ನುಡಿದರು.

ಕಾರ್ಯಕ್ರಮದಲ್ಲಿ ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಸಂಸ್ಥೆಯ ಶಿಕ್ಷಕಿಯರಾದ ಪೂಜಾ ಹೂಗಾರ, ಕಾವೇರಿ ಹೌದೆ, ಸ್ನೇಹಾ ಚವ್ಹಾಣ, ಮುಸ್ಕಾನ್ ಶೇಖ್ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಮದ್ಯದ ಅಮಲಿನಲ್ಲಿ ನೇಣು ಹಾಕಿಕೊಂಡು ವ್ಯಕ್ತಿ ಆತ್ಮಹತ್ಯೆ

**ಕಲಬುರಗಿ,ಸೆ.5–**ಮದ್ಯಪಾನ ಚಟಕ್ಕೆ ಅಂಟಿಕೊಂಡಿದ್ದ ವ್ಯಕ್ತಿಯೊಬ್ಬ ಅಮಲಿನಲ್ಲಿ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಇಲ್ಲಿನ ರಾಮತೀರ್ಥ ನಗರದಲ್ಲಿ ನಡೆದಿದೆ.

ರವಿಕಾಂತ ತಂದೆ ರೇವಣಸಿದ್ದಪ್ಪ ಪಾಟೀಲ (45) ಆತ್ಮಹತ್ಯೆ ಮಾಡಿಕೊಂಡವರು.

ಜೆಸಿಬಿ ಶೋರೂಮದಲ್ಲಿ ಸೇಲ್ಸ್‌ಮ್ಯಾನ್ ಕೆಲಸ ಮಾಡುತ್ತಿದ್ದ ರವಿಕಾಂತ ಅವರು ಮದ್ಯಪಾನ ಚಟಕ್ಕೆ ಅಂಟಿಕೊಂಡಿದ್ದರು. ಸೆ. 3 ರಂದು ರಾತ್ರಿ ಮನೆಯಲ್ಲಿ ಫ್ಯಾನಿಗೆ ಸೀರೆಯಿಂದ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಮೃತನ ಪತ್ನಿ ರೂಪಾ ಪಾಟೀಲ ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ಸಲ್ಲಿಸಿರುವ ದೂರಿನಲ್ಲಿ ತಿಳಿಸಿದ್ದಾರೆ. ಸಬ್–ಸರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅನ್ಯಾಯ, ದಬ್ಬಾಳಿಕೆ ಹೆಚ್ಚಳ: ಕಳವಳ




**ಬೀದರ್:ಸೆ.5–** ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಪ್ರಸ್ತುತ ದಲಿತರು, ಅಲ್ಪಸಂಖ್ಯಾತರು, ಮಹಿಳೆಯರ ಮೇಲೆ ಅನ್ಯಾಯ, ದಬ್ಬಾಳಿಕೆ ಹೆಚ್ಚುತ್ತಿದೆ ಎಂದು ಜಮಾ ಅತೆ ಇಸ್ಲಾಮಿ ಹಿಂದ್ ಕೇಂದ್ರ ಸಲಹಾ ಮಂಡಳಿ ಸದಸ್ಯ ಮೌಲಾನಾ ಮುಹಮ್ಮದ್ ಇಕ್ಬಾಲ್ ಮುಲ್ಲಾ ತೀವ್ರ ಕಳವಳ ವ್ಯಕ್ತಪಡಿಸಿದರು.

ನಗರದ ಬೀದರ್ ಗೇಟ್ ವೇ ಸಭಾಂಗಣದಲ್ಲಿ ನ್ಯಾಯದ ಹರಿಕಾರ ಪೈಗಂಬರ್ ಮುಹಮ್ಮದ್ ಸೀರತ್ ಅಭಿಯಾನ ಪ್ರಯುಕ್ತ ಗುರುವಾರ ಏರ್ಪಡಿಸಿದ್ದ 'ನ್ಯಾಯದ ಹರಿಕಾರ ಪೈಗಂಬರ್ ಮುಹಮ್ಮದ್' ಸಂವಾದದಲ್ಲಿ ಅವರು ಮಾತನಾಡಿದರು.

ಆರನೇ ಶತಮಾನದಲ್ಲಿ ಹೆಣ್ಣುಮಕ್ಕಳನ್ನು ಜನಿಸಿದ ಕೂಡಲೇ ಸಮಾಧಿ ಮಾಡಲಾಗುತ್ತಿತ್ತು. ಇಂದು ಅನೇಕ ಶ್ರೀಮಂತರು ಹೆಣ್ಣು ಭ್ರೂಣ ಹತ್ಯೆ ಮಾಡುತ್ತಿದ್ದಾರೆ. ಹೆಣ್ಣುಮಕ್ಕಳ ಬದುಕುವ ಹಕ್ಕು ಕಸಿಯುತ್ತಿದ್ದಾರೆ ಎಂದು ಹೇಳಿದರು.

ನಿರಪರಾಧಿಗಳು 30–35 ವರ್ಷ ಜೈಲಿನಲ್ಲಿದ್ದು ನಂತರ ನಿರಪರಾಧಿಗಳಾಗಿ ಬಿಡುಗಡೆಗೊಳ್ಳುತ್ತಿದ್ದಾರೆ. ಐದು ವರ್ಷಗಳಿಂದ ಜೈಲಿನಲ್ಲಿರುವ ಕೆಲವರ ವಿಚಾರಣೆ ಇನ್ನೂ ಪ್ರಾರಂಭವೇ ಆಗಿಲ್ಲ ಎಂದು ನ್ಯಾಯದ ಕುರಿತು ಅಸಂತೋಷ ವ್ಯಕ್ತಪಡಿಸಿದರು.

ಪ್ರವಾದಿ ಅವರು ಗಂಡು–ಹೆಣ್ಣು ಎನ್ನುವ ಭೇದ ತೊಡೆದು ಹಾಕಿದರು. ಯಾರಿಗಾದರೂ ಮೂವರು ಹೆಣ್ಣುಮಕ್ಕಳಿದ್ದರೆ, ಅವರ ಪಾಲನೆ–ಪೊ?ಷಣೆ ಮಾಡಿದರೆ ಅವನು ಪ್ರವಾದಿಯವರ ಜತೆ ಸ್ವರ್ಗದಲ್ಲಿರುವನು ಎಂದು ಹೇಳಿದ್ದಾರೆ ಎಂದು ತಿಳಿಸಿದರು.

ತಾಯಿಯ ಪಾದದಲ್ಲೇ ಸ್ವರ್ಗವಿದೆ ಎಂಬ ಪ್ರವಾದಿಯವರ ವಚನ ಹೇಳಿ, ಹೆಣ್ಣುಮಕ್ಕಳ ಮಹತ್ವ ಮನವರಿಕೆ ಮಾಡಿದರು.

ಪ್ರವಾದಿ ಅವರು ಮಾನವರೆಲ್ಲ ಸಮಾನರು. ಒಂದೇ ತಂದೆ–ತಾಯಿಯ ಮಕ್ಕಳೆಂದು ಸಾರಿದರು. ಜಾತಿ, ಧರ್ಮ, ಮನೆತನ, ಬಣ್ಣ, ಭಾಷೆ ಆಧಾರಿತ ತಾರತಮ್ಯ ಹೋಗಲಾಡಿಸಿದರು. ಜನರ ಮನ ಪರಿವರ್ತನೆ ಮಾಡಿದರು. ಎಲ್ಲರಿಗೂ ಬದುಕುವ ಹಕ್ಕು ಕಲ್ಪಿಸಿದರು. ನ್ಯಾಯ ಸ್ಥಾಪಿಸಿದರು ಎಂದು ತಿಳಿಸಿದರು.

ದೇವರಿಗೆ ಭಯಪಟ್ಟು, ಪ್ರವಾದಿ ಮುಹಮ್ಮದ್(ಸ) ಅವರ ಜೀವನ ಅನುಸರಿಸಿದರೆ ಮತ್ತೆ ನ್ಯಾಯ ಸ್ಥಾಪಿಸಲು ಸಾಧ್ಯವಿದೆ ಎಂದು ತಿಳಿಸಿದರು.

ನಿವೃತ್ತ ಪ್ರಾಚಾರ್ಯ ಮುಹಮ್ಮದ್ ನಿಝಾಮುದ್ದೀನ್ ಅವರು, ಪೈಗಂಬರ್ ಮುಹಮ್ಮದ್ ನ್ಯಾಯದ ಹರಿಕಾರರಾಗಿದ್ದಾರೆ. ಸಾಮಾಜಿಕ, ಆರ್ಥಿಕ, ಮೂಲಭೂತ ಸೌಲಭ್ಯಗಳಂತಹ ವಿಷಯಗಳಲ್ಲಿ ಅವರ ನ್ಯಾಯ ಪರತೆ ಕಾಣಬಹುದಾಗಿದೆ ಎಂದು ತಿಳಿಸಿದರು.

ಉಪನ್ಯಾಸಕಿ ವಿದ್ಯಾದೇವಿ ಹಿರೇಮಠ ಅವರು, ನಾನು ಪ್ರವಾದಿ ಮುಹಮ್ಮದರ ಜೀವನದ ಪುಸ್ತಕ ಓದಿದಾಗ ಅವರ ಕುರಿತ ನನ್ನ ಮೊದಲಿನ ಅಭಿಪ್ರಾಯ ಬದಲಾಯಿತು. ನಿಷ್ಪಕ್ಷಪಾತ ಕನ್ನಡಕದಿಂದ ಇಸ್ಲಾಂ ಧರ್ಮದ ಅಧ್ಯಯನ ಮಾಡಿದರೆ ಸತ್ಯ ತಿಳಿಯುತ್ತದೆ ಎಂದರು.

ಡಾ. ರಾಮಚಂದ್ರ ಗಣಾಪುರ, ಡಾ. ವಿಜಯಶ್ರೀ ಬಶೆಟ್ಟಿ ಅವರು ಪ್ರವಾದಿಯವರ ಜೀವನದ ಮೇಲೆ ಬೆಳಕು ಚೆಲ್ಲಿದರು.

ಶಾಂತಿ ಪ್ರಕಾಶನದ ಪ್ರವಾದಿ ಮುಹಮ್ಮದ್ ಅವರ ಜೀವನ ಕುರಿತ ಎರಡು ಕೃತಿಗಳನ್ನು ಮೌಲಾನಾ ಮುಹಮ್ಮದ್ ಇಕ್ಬಾಲ್ ಮುಲ್ಲಾ ಹಾಗೂ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಗೀತಾ ಪಂಡಿತರಾವ್ ಚಿದ್ರಿ ಬಿಡುಗಡೆ ಮಾಡಿದರು.

ಜಮಾ ಅತೆ ಇಸ್ಲಾಮಿ ಹಿಂದ್ ರಾಜ್ಯ ಸಲಹಾ ಮಂಡಳಿ ಸದಸ್ಯ ಮುಹಮ್ಮದ್ ಆಸಿಫುದ್ದೀನ್, ಬೀದರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ವಿಠ್ಠಲದಾಸ್ ಪ್ಯಾಗೆ, ಜಮಾ ಅತೆ ಇಸ್ಲಾಮಿ ಹಿಂದ್ ಮಹಿಳಾ ವಿಭಾಗದ ಸಂಚಾಲಕಿ ಅಸ್ಮಾ ಸುಲ್ತಾನಾ, ಜಿಲ್ಲಾ ಸಂಚಾಲಕಿ ತಾಹೀದ್ ಸಿಂಧೆ, ಪ್ರಮುಖರಾದ ಶ್ರೀಕಾಂತ ಸ್ವಾಮಿ, ಗುರುನಾಥ ಗಡ್ಡೆ, ಓಂಪ್ರಕಾಶ ರೊಟ್ಟೆ, ಮಹೇಶ ಗೋರನಾಳಕರ್, ವಿನಯ್ ಮಾಳಗೆ, ಎಂ.ಎಸ್. ಉಪ್ಪಿನ್, ಡಾ. ಲಕ್ಕಿ, ಬಾಬುರಾವ್ ಹೊನ್ನಾ, ವಿಜಯಕುಮಾರ, ಜಗದೀಶ್ ಬಿರಾದಾರ, ಶಿಕ್ಷಕಿಯರಾದ ಬಿಲ್‌ಕಿಸ್ ಫಾತಿಮಾ, ಲತಿಕಾ, ಡಾ. ಸಾಲಿಕಾ ಕೌಸರ್ ಮತ್ತಿತರರು ಇದ್ದರು.

ಮುಹಮ್ಮದ್ ತಾಹಾ ಕಲೀಮುದ್ದೀನ್ ಕುರ್‌ಆನ್ ಪಠಿಸಿದರು. ಸಿರಾಜ್ ನೆಲವಾಡ ಕನ್ನಡಕ್ಕೆ ಅನುದಾದಿಸಿದರು. ಜಮಾ ಅತೆ ಇಸ್ಲಾಮಿ ಹಿಂದ್ ಸ್ಥಳೀಯ ಘಟಕದ ಅಧ್ಯಕ್ಷ ಮುಹಮ್ಮದ್ ಮೌಅಜ್ಜಂ ಸ್ವಾಗತಿಸಿದರು. ಮುಹಮ್ಮದ್ ಆರಿಫುದ್ದೀನ್ ವಂದಿಸಿದರು.

# ಹೆಣ್ಣು ಮಕ್ಕಳ ಮೇಲಾಗುವ ದೌರ್ಜನ್ಯ ತಡೆಗೆ ಅಕ್ಕ ಪಡೆ ಸದಾ ಸಿದ್ಧ : ಮೀನಾಕ್ಷಿ ನಾಗೂರ್ಕರ



**ಔರಾದ್,ಸೆ.5–**ಪೊಲೀಸ್ ವರಿಷ್ಠಾಧಿಕಾರಿಗಳ ಮಾರ್ಗದರ್ಶನದಲ್ಲಿ ನಮ್ಮ ಜಿಲ್ಲೆಯ ಎಲ್ಲ ಕಡೆ ಅಕ್ಕಪಡೆ ಸಿಬ್ಬಂದಿಗಳು ಮಹಿಳೆಯರ ಮೇಲಾಗುವ ದೌರ್ಜನ್ಯಗಳನ್ನು ತಡೆಯಲು ಲೇಡಿ ಸಿಂಗಂ ಗಳಂತೆ ಸಮಾಜದ ಸೇವೆ ಮಾಡಲು ಸದಾ ಸಿದ್ಧರಾಗಿದ್ದೇವೆ ಎಂದು ಸಂತಪೂರ ಪೋಲಿಸ್ ಠಾಣೆಯ ಅಕ್ಕಪಡೆಯ ಸಿಬ್ಬಂದಿ ಮೀನಾಕ್ಷಿ ನಾಗೂರ್ಕರ ಹೇಳಿದರು.

ತಾಲೂಕಿನ ವಡಗಾಂವ್(ದೆ ) ಗ್ರಾಮದ ಸರಕಾರಿ ಕನ್ಯಾ ಪ್ರೌಢಶಾಲೆಯಲ್ಲಿ ಗುರುವಾರ ಸಂತಪುರ ಅಕ್ಕಪಡೆಯ ಪೊಲೀಸ್ ಸಿಬ್ಬಂದಿಗಳಿಂದ ಹೆಣ್ಣು ಮಕ್ಕಳ ಮೇಲಾಗುವ ದೌರ್ಜನ್ಯಗಳನ್ನು ತಡೆಯುವ ಬಗ್ಗೆ ಜಾಗೃತಿ ಕಾರ್ಯಕ್ರಮ ಮಾಡಿ ಮಾತನಾಡಿದ ಅವರು, ಅಕ್ಕಪಡೆಯ ಮಹಿಳಾ ಪೊಲೀಸ್ ತಂಡದವರು ನಾವು ನಿಮ್ಮ ರಕ್ಷಣೆಗೆ ಸದಾ ಕಾಲ ಇರುತ್ತೇವೆ. ಯಾವುದೇ ತೊಂದರೆಗಳಾದರೂ ನೀವು ನಮಗೆ ತಿಳಿಸಬಹುದು. ಯಾವುದೇ ಕಾರಣಕ್ಕೂ ಭಯಪಡುವಾಗ ಅಗತ್ಯವಿಲ್ಲವೆಂದು ಮಕ್ಕಳಿಗೆ ಜಾಗೃತಿ ಮೂಡಿಸಿ ಅಭಯ ನೀಡಿದರು.

ಸಿಬ್ಬಂದಿ ಅನಿತಾ ಜೂಕಾಲೆ ಮಾತನಾಡಿ, ಹೆಣ್ಮಕ್ಕಳ ರಕ್ಷಣೆಗಾಗಿ ಅಕ್ಕಪಡೆ ತಂಡವನ್ನು ರಚಿಸಲಾಗಿದ್ದು, ಲೇಡಿ ಸಿಂಗಂ ಗಳು ಪುಂಡಪೋಕರಿಗಳಿಗೆ ಸಿಂಹ ಸ್ವಪ್ನರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಶಾಲೆಯಲ್ಲಿ ಹೆಣ್ಣು ಮಕ್ಕಳು ಯಾವುದೇ ರೀತಿಯ ಸಮಸ್ಯೆಗಳಿದ್ದರೆ ನಮ್ಮ ಫೋನ್ ನಂಬರ್ ಗಳಿಗೆ ಸಂಪರ್ಕ ಮಾಡಿ ಎಂದು ತಿಳಿಸಿದರು.

ಈ ಸಂಧರ್ಭದಲ್ಲಿ ಮುಖ್ಯ ಗುರು ಹನುಮಂತ ರಾಯ, ಭಾರತ ಬಾಯಿ, ಶೇಷಪ್ಪ, ಅಪ್ಸಾನ ಬೇಗಂ ಸೇರಿದಂತೆ ಇನ್ನಿತರರಿದ್ದರು.

# ಶಿಕ್ಷಕರು ರಾಷ್ಟ್ರ ನಿರ್ಮಾಣಕಾರರು:ಸಿಯುಕೆ ಕುಲಪತಿ ಬಟ್ಟು ಸತ್ಯನಾರಾಯಣ

**ಕಲಬುರಗಿ,ಸೆ.5–** ಶಿಕ್ಷಕರು ರಾಷ್ಟ್ರ ನಿರ್ಮಾಣಕಾರರು ಎಂದು ಕರ್ನಾಟಕಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿ ಪ್ರೋ ಬಟ್ಟು ಸತ್ಯನಾರಾಯಣ ಹೇಳಿದರು. ಅವರು ಸಿಯುಕೆಯಲ್ಲಿ ನಡೆದ ಶಿಕ್ಷಕರ ದಿನಾಚರಣೆಯ ಸಂದರ್ಭದಲ್ಲಿ ಮಾತನಾಡುತ್ತಿದ್ದರು. ಅವರು ಮುಂದುವರೆದು ಮಾತನಾಡಿ ಡಾ. ಸರ್ವಪಲ್ಲಿ ರಾಧಾಕೃಷ್ಣನ ಅವರು ಒಬ್ಬ ಶ್ರೇಷ್ಠ ಶಿಕ್ಷಕರಾಗಿದ್ದರು ಅವರ ಜನ್ಮ ದಿನವನ್ನು ಶಿಕ್ಷಕರ ದಿನವನ್ನಾಗಿ ನಾವು ಆಚರಿಸುತ್ತಿದ್ದೇವೆ ಎಂದು ಅವರು ಹೇಳಿದರು.



# ಸಂಧಿವಾತ ರೋಗ ನಿರ್ವಹಣೆ ಮತ್ತು ಸವಾಲುಗಳು

ಪ್ರಸ್ತುತದ ಕೋವಿಡ್-19 ಆರೋಗ್ಯ ಕ್ಷೇತ್ರದ ಚಿತ್ರಣ ಮತ್ತು ಲೆಕ್ಕಾಚಾರವನ್ನು ಭಾರೀ ಪ್ರಮಾಣದಲ್ಲಿ ಬದಲಾಯಿಸಿದೆ. ಈ ಸಾಂಕ್ರಾಮಿಕದ ಸಂದರ್ಭದಲ್ಲಿ ಸಂಧಿವಾತ ಆರ್ಥಿರಿಟೀಸ್,ಲುಪುಸ್, ವಾಸ್ಕುಲಿಟಿಸ್, ಪ್ರೈರೋಡರ್ಮಾ, ಸೋರಿಯಾಟಿಕ್ ಆರ್ಥಿರಿಟೀಸ್‌ನಿಂದ ಬಳಲುತ್ತಿರುವವರು ಸಾಕಷ್ಟು ವಿಶಿಷ್ಟವಾದ ಸವಾಲುಗಳನ್ನು ಎದುರಿಸುವಂತಾಗಿದೆ.

ಈ ಸಂಧಿವಾತ ಇರುವ ರೋಗಿಗಳಲ್ಲಿ ಕೋವಿಡ್-19 ಸೋಂಕಿನ ಫಲಿತಾಂಶಗಳು, ಕೋವಿಡ್ ಸೋಂಕು ಮತ್ತು ಲಸಿಕೆ ಮೇಲೆ ಸಂಧಿವಾತದ ಔಷಧಿಗಳ ಪ್ರಭಾವದ ಬಗ್ಗೆ ಸಾಮಾಜಿಕ ಮಾಧ್ಯಮ ತಪ್ಪು ಗ್ರಹಿಕೆ ಮತ್ತುತಪ್ಪಾದ ಅಂಶಗಳನ್ನು ಬಿತ್ತರ ಮಾಡುತ್ತಿದೆ. ಸಂಧಿವಾತ ಕಾಯಿಲೆಯನ್ನು ಹೊಂದಿರುವ ರೋಗಿಗಳಲ್ಲಿ ಕೋವಿಡ್-19ಅನ್ನು ಸಂಕುಚಿತಗೊಳಿಸುವುದರಿಂದ ಎದುರಾಗುವ ಕೆಟ್ಟಫಲಿತಾಂಶಗಳ ಬಗ್ಗೆ ಅನೇಕ ಕ್ಲಿನಿಕಲ್ ಸಂಶೋಧನಾ ಅಧ್ಯಯನಗಳಮೂಲಕತಿಳಿಸಲಾಗಿದೆ. ದೀರ್ಘಕಾಲೀನಸಂಧಿವಾತದಿಂದಗೆ ಬಳಲುತ್ತಿರುವ ರೋಗಿಗಳು ಕೋವಿಡ್-19 ಸಾಂಕ್ರಾಮಿಕದ ಸಂದರ್ಭದಲ್ಲಿ ಹಲವಾರು ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಲಾಕ್‌ಡೌನ್, ಆಸ್ಪತ್ರೆಗಳನ್ನು ಮುಚ್ಚಿರುವುದು ಮತ್ತುಕ್ಲಿನಿಕ್‌ಗಳಲ್ಲಿ ಹೊರ ರೋಗಿಗಳಿಗೆ ಚಿಕಿತ್ಸೆ ನೀಡದಿರುವುದು, ಸಾರಿಗೆ ವ್ಯವಸ್ಥೆ ಕೊರತೆ ಇರುವುದು, ಆನ್‌ಲೈನ್ ಅಥವಾ ಟೆಲಿ ಕನ್ಸಲೇಷನ್ ಬಗ್ಗೆ ಹೆಚ್ಚಿನ ಅರಿವು ಇಲ್ಲದಿರುವುದು, ಇಂಟರ್‌ನೆಟ್ ಸೇವೆ ಕಳಪೆಯಾಗಿರುವುದು, ನಿಗದಿಯಂತೆ ಆಸ್ಪತ್ರೆಗಳಿಗೆ ತಪಾಸಣೆಗೆ ಹೋಗಲು ಭಯ ತುವುದು, ತಮ್ಮರೋಗದ ಬಗ್ಗೆ ಫಾಲೋ-ಅಪ್ ಮಾಡುವಲ್ಲಿ ಮತ್ತು ಔಷಧಿ ತೆಗೆದುಕೊಳ್ಳುವುದರಿಂದ ಹಿಂದೇಟು ಹಾಕುವುದು ಸೇರಿದಂತೆ ಇನ್ನಿತರೆ ಸಮಸ್ಯೆಗಳನ್ನು ಎದುರಿಸುತ್ತಾರೆ.



ನಮ್ಮರೋಗಿಗಳಲ್ಲಿ ಗಮನಾರ್ಹವಾದ ಪ್ರಮಾಣದ ಅಗತ್ಯವಿರುವ ಭೌತಚಿಕಿತ್ಸೆಯಂ ತಹ ಸಂಬಂಧಿತ ಸೇವೆಗ ಳಿಗೆ ಇದು ಅನ್ವಯವಾಗುತ್ತದೆ. ಇಂಡಿಯನ್ ಸಿಸ್ಟಾಮಿಕ್ ಪ್ರೈರೋಸಿಸ್ ರಿಜಿಸ್ಟ್ರಿಯು ಸ್ಯೆರೋಡರ್ಮಾ ರೋಗಿಗಳ ಇತ್ತೀಚಿನ ಅಧ್ಯಯನದಲ್ಲಿ ಶೇ.92.3 ರಷ್ಟು ರೋಗಿಗಳು ತಮ್ಮನಿಗದಿತ ಹೊರ ರೋಗಿಗಳನೇಮಕಾತಿಗಳನ್ನು ತಪ್ಪಿಸಿಕೊಂಡಿದ್ದಾರೆ ಮತ್ತು ಶೇ.22.3 ರಷ್ಟು ರೋಗಿಗಳು ತಮ್ಮ ಔಷಧಿಗಳನ್ನು ಬಿಟ್ಟಿದ್ದಾರೆ ಎಂಬುದನ್ನು ಗಮನಿಸಲಾಗಿದೆ. ಈ ಸಮೀಕ್ಷೆಯ ಪ್ರಕಾರ ಶೇ.22.3 ರಷ್ಟು ರೋಗಿಗಳ ಕುಟುಂಬ ಸದಸ್ಯರು ಉದ್ಯೋಗವನ್ನೂ ಕಳೆದುಕೊಂಡಿದ್ದಾರೆ.

ಮಕ್ಕಳನ್ನು ಹೆರುವ ಗುಂಪಿನ ಹೆಚ್ಚು ಮಹಿಳೆಯರು ಈ ಸಂಧಿವಾತದಿಂದ ಬಳಲುವುದರಿಂದ ಗರ್ಭಧಾರಣೆ ಮತ್ತು ಪ್ರಸವಪೂರ್ವ ಆರೈಕೆಯಲ್ಲಿ ಹೆಚ್ಚು ಜಾಗರೂಕರಾಗಿರಬೇಕು. ಕೋವಿಡ್ ಸಾಂಕ್ರಾಮಿಕದ ಈ ಸಂದರ್ಭದಲ್ಲಿ ಇದು ಸವಾಲಾಗಿ ಪರಿಣಮಿಸಿದೆ. ಇದರ ಜತೆಗೆ ಗರ್ಭಿಣಿ ಮತ್ತು ಹಾಲುಣಿಸುವ ತಾಯಂದಿರುವ ಕೋವಿಡ್ ಲಸಿಕೆಯನ್ನು ಪಡೆದುಕೊಳ್ಳಲು ಅರ್ಹರಾಗಿರುವುದಿಲ್ಲ.ಇದುಅವರನ್ನು ಹೆಚ್ಚು ಅಪಾಯಕ್ಕೀಡಾಗುವಂತೆ ಮತ್ತು ಆತಂಕಕ್ಕೆ ಒಳಗಾಗುವಂತೆ ಮಾಡಿದೆ.

ಕೋವಿಡ್-19 ಸಾಂಕ್ರಾಮಿಕ

ಸಂದರ್ಭದಲ್ಲಿ ಸಂಧಿವಾತದಿಂದ ಬಳಲುತ್ತಿರುವ ರೋಗಿಗಳು ತಮ್ಮ ನಿಗದಿತಮ ತ್ತುನಿರ್ದಿಷ್ಟ ಔಷಧಿ ಗಳನ್ನು ಪಡೆದುಕೊಳ್ಳುವುದು ಕಷ್ಟಕರವಾಗಿದೆ. ಹೈಡ್ರೋಕ್ಲೋರೋಕ್ವಿನ್ ಸಲ್ಫೇಟ್ (ಎಚ್‌ಸಿಕ್ಯೂಎಸ್) ಅನ್ನು ಲುಪುಸ್ ಮತ್ತು ಸಂಧಿವಾತ ಆರ್ಥಿರಿಟಿಸ್ ರೋಗಿಗಳು ನಿಯಮಿತವಾಗಿ ಬಳಸುತ್ತಾರೆ. ಸಾಂಕ್ರಾಮಿಕದ ಮೊದಲ ಅಲೆಯ ವೇಳೆ ಎಚ್‌ಸಿಕ್ಯೂಎಸ್ ಕೋವಿಡ್-19ಗೆ ಚಿಕಿತ್ಸೆ ಮತ್ತು ರೋಗನಿರೋಧಕದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.ಪರಿಣಾಮ ಆರ್ಥಿರಿಟಿಸ್ ರೋಗಿಗಳಿಗೆ ಅತ್ಯಂತ ಅಗತ್ಯವಿರುವ ಔಷಧವಾಗಿರುವ ಈಎಚ್‌ಸಿಕ್ಯೂಎಸ್ ಪೂರೈಕೆ'ಯಲ್ಲಿ ಭಾರೀ ಕೊರತೆ ಕಂಡುಬರುತ್ತಿದೆ. ಇದರಿಂದಾಗಿ ರೋಗ ಉಲ್ಬಣಗೊಳ್ಳುತ್ತಿದೆ. ಪ್ರಸ್ತುತ ತಲೆದೋರಿರುವ ಅಲೆಯಲ್ಲಿ ಟೊಸಿಲಿಝುಮಾಬ್ ಎಂಬ ಮತ್ತೊಂದು ಔಷಧಕ್ಕೆ ಮಹತ್ವ ನೀಡಲಾಗುತ್ತಿದೆ. ಇದನ್ನು ಸಂಧಿವಾತ ಆರ್ಥಿರಿಟಿಸ್, ಮಕ್ಕಳಲ್ಲಿನ ಆರ್ಥಿರಿಟಿಸ್ ಮತ್ತು ಇನ್ನೊಂದು ರೋಗವಾದ ಟೆಂಪೋರಲ್ ಆರ್ಥಿರಿಟಿಸ್ ಚಿಕಿತೆ-ಬಳಸಲಾಗುತ್ತದೆ. ಸಾಧಾರಣ ಶ್ವಾಸಕೋಶ ಸಂಬಂಧಿರೋಗದಿಂದ ಬಳಲುತ್ತಿರುವ ಕೋವಿಡ್ ರೋಗಿಗಳ ಚಿಕಿತ್ಸೆಗೆ ಈ ಟೊಸಿಲಿಝುಮಾಬ್ ಬಳಸಬಹುದೆಂದು ಶಿಫಾರಸು ಮಾಡಲಾಗಿದೆ.ಇದರಿಂದಾಗಿ ಈ ಟೊಸಿಲಿಝುಮಾಬ್ ಔಷಧಿಗೆ ಬೇಡಿಕೆ ಹೆಚ್ಚಾಗಿ, ಕೊರತೆ ಉಂಟಾಗುತ್ತಿದೆ.ಕೋವಿಡ್ ರೋಗಿಗಳ ಸಂಖ್ಯೆಯಲ್ಲಿ ಹೆಚ್ಚಳವಾಗುತ್ತಿದೆ ಮತ್ತು ಟೊಸಿಲಿಝುಮಾಬ್‌ಗೆ ಬೇಡಿಕೆ ಹೆಚ್ಚಾಗುತ್ತಿದ್ದು,ಔಷಧಿಯ ಕೊರತೆ ಸೃಷ್ಟಿಯಾಗಿದೆ. ಮತ್ತೊಂದು ಆರ್ಥಿರಿಟಿಸ್‌ಗೆ ಔಷಧವೆಂದರೆ ಬೆರಿಸಿಟಿನಿಬ್ .ಇದನ್ನು ಕೋವಿಡ್ ಸೋಂಕಿತರಚಿಕಿತ್ಸೆಗೆ ಬಳಸಲಾಗುತ್ತಿದೆ. ಈಹಿನ್ನೆಲೆಯಲ್ಲಿ ಆರ್ಥಿರಿಟಿಸ್‌ನಿಂದ ಬಳಲುತ್ತಿರುವ ರೋಗಿಗಳ ಚಿಕಿತೆಗಾಗಿ ಔಷಧವನ್ನು ಖರೀದಿಸಲು ಸಾಧ್ಯವಾಗದ ಪರಿಸ್ಥಿತಿ ಬಂದಿದೆ. ಈ ಎರಡೂ ಜೆನರಿಕ್ ಅಲ್ಲ ಮತ್ತು ಭಾರತದಲ್ಲಿ ಇವುಗಳ ಉತ್ಪಾದನೆಯಾಗುತ್ತಿಲ್ಲದ ಕಾರಣದಿಂದ ವಿದೇಶಗಳಿಂದ ರಫ್ತು ಮಾಡಿಕೊಳ್ಳಲಾಗುತ್ತಿದೆ. ಇದರ ಪರಿಣಾಮ ಔಷಧಗಳ ಲಭ್ಯತೆ ಕಷ್ಟವಾಗುತ್ತಿದೆ.ದೀರ್ಘಕಾಲದ ಸಂಧಿವಾತ ಹೊಂದಿರುವ ಮಹಿಳೆಯರು ತಮ್ಮ ದೈನಂದಿನ ಕೆಲಸಗಳನ್ನುನಿರ್ವಹಿಸುವ ಸಾಮರ್ಥ್ಯವನ್ನು ಕಡಿಮೆ ಮಾಡುವ ಜಾಯಿಂಟ್ ಡಿಫಾರ್ಮಿಟಿಸ್ ಅನ್ನು ವಿಕ್ರಂ ಹಾಸ್ಪಿಟಲ್ ನ ಡಾ.ರಮೇಶ್ ಹೊಂದಿರಬಹುದು. ಅದರಂತೆ ಅಸಮರ್ಪಕವಾಗಿ ನಿಯಂತ್ರಿಸಲ್ಪಟ್ಟ ಕಾಯಿಲೆ ಇರುವವರು ನಿರಂತರ ನೋವನ್ನು ಅನುಭವಿಸುತ್ತಾರೆ ಎಂದು ಜೋಯಿಸ್ ತಿಳಿಸಿದ್ದಾರೆ.ಪ್ರಸ್ತುತ ಸಾಂಕ್ರಾಮಿಕ ಈ ಸಂದರ್ಭದಲ್ಲಿ ನಮಗಿರುವ ಒಂದೇ ಒಂದು ಆಶಾಕಿರಣವೆಂದರೆ ಲಸಿಕಾಕರಣ. ಸಂಧಿವಾತದಿಂದ ಬಳಲುತ್ತಿರುವವರು ಲಸಿಕೆಯನ್ನು ಪಡೆದುಕೊಳ್ಳುವ ವಿಚಾರದಲ್ಲಿ ಅಲ್ಲಲ್ಲಿ ಅನುಮಾನಗಳು ಮೂಡಿದ್ದವು. ಆದರೆ, ಅಮೆರಿಕನ್ ಕಾಲೇಜ್ ಆಫ್ ಹೆಮಟೋಲಾಜಿಯು ಸಂಧಿವಾತ ಇರುವವರು ಕೋವಿಡ್ ಲಸಿಕೆಯನ್ನು ಪಡೆದುಕೊಳ್ಳುವುದು ಸುರಕ್ಷಿತ ಎಂದು ಶಿಫಾರಸು ಮಾಡಿದೆ.

# ಅರಿಶಿನ ಹಾಲಿನ ಉಪಯೋಗಗಳು

ಅರಿಶಿನ ಹಾಲು ವೈರಸ್ ವಿರೋಧಿ ಮತ್ತು ಬ್ಯಾಕ್ಟಿರಿಯಾ ನಿರೋಧಕ ಗುಣಗಳನ್ನು ಹೊಂದಿರುವ ಕಾರಣ ಇದು ಕೆಮ್ಮು, ನೆಗಡಿ, ನೋಯುತ್ತಿರುವ ಗಂಟಲು, ಶೀತಕ್ಕೆ ತ್ವರಿತ ಪರಿಹಾರವನ್ನು ನೀಡುತ್ತದೆ.

ಮೂಳೆಗಳ ದೃಢತೆಗೆ ಅರಿಶಿನ ಹಾಲು ಸಹಕಾರಿಯಾಗುತ್ತದೆ. ಇದು ಮೂಳೆಗಳನ್ನು ಬಲವಾಗಿ ಇರಿಸಿಕೊಳ್ಳಲು ಸಹಾಯ ಮಾಡುವ ಕ್ಯಾಲ್ಸಿಯಂನ ಉತ್ತಮ ಮೂಲವಾಗಿದೆ. ಮಹಿಳೆಯರಲ್ಲಿ ಮಾಸಿಕ ದಿನಗಳಲ್ಲಿ ಕಾಡುವ ಕೆಳಹೊಟ್ಟೆನೋವು ಮೊದಲಾದ ಎಲ್ಲಾ ಸಮಸ್ಯೆಗಳಿಗೆ ಅರಿಶಿನದ ಹಾಲು ಸಹಾಯ ಮಾಡುತ್ತದೆ.

ಅರಿಶಿನ ಹಾಲು ಬ್ಯಾಕ್ಟಿರಿಯಾದ ಸೋಂಕುಗಳು ಮತ್ತು ವೈರಸ್ ಸೋಂಕುಗಳು ದೇಹವನ್ನು ಆಕ್ರಮಿಸುವುದನ್ನು ವಿರೋಧಿಸುತ್ತದೆ. ಅರಿಶಿನಹಾಲನ್ನು ಸೇವಿಸುವುದರಿಂದ ಉಸಿರಾಟ ಸಂಬಂಧಿತೊಂದರೆಗಳು ಮತ್ತು ಸೈನಸ್ ಸಮಸ್ಯೆಗಳು ನಿವಾರಣೆಂಯಾಗುತ್ತದೆ.

ಅರಿಶಿನ ಹಾಲು ಉರಿಯೂತ ವಿರೋಧಿ ಗುಣಲಕ್ಷಣಗಳನ್ನು ಹೊಂದಿರುವುದರಿಂದ ಸ್ತನ, ಚರ್ಮ,ಶ್ವಾಸಕೋಶ,ಗುದನಾಳದ ಕ್ಯಾನ್ಸರ್‌ನಂತಹ ಬೆಳವಣಿಗೆಗಳನ್ನು ತಡೆಯುತ್ತದೆ. ಅರಿಶಿನ ಹಾಲು ಅಮೈನೊ ಆಮ್ಲ, ಟ್ರಿಪ್ಟೋಫಾನ್‌ನ್ನು ಉತ್ಪಾದಿಸುವುದರಿಂದ ಇದನ್ನು ಮಲಗುವ ಮುಂಚೆ ಸೇವಿಸುವುದರಿಂದ ಶಾಂತಿಯುತ ಮತ್ತು ಸುಖವಾದ ನಿದ್ರೆಗೆ ಕಾರಣವಾಗುತ್ತದೆ.

ಅರಿಶಿನ ಹಾಲು ಪಿತ್ತರಸದ ಉತ್ಪತ್ತಿಯನ್ನು ಹೆಚ್ಚಿಸುವುದಲ್ಲದೇ ಅಮ್ಲದ ಹಿಮ್ಮುಖ ಹರಿವು,ಹೊಟ್ಟೆಯುಬ್ಬರವನ್ನು ತಡೆಯುತ್ತದೆ. ಕರುಳಿನಕ್ರಿಯೆಯನ್ನು ಸರಾಗವಾಗಿಸಿ ಮಲಬದ್ಧತೆಯ ನಿವಾರಣೆಗೆ ಅರಿಶಿನದ ಹಾಲು ಉಪಯುಕ್ತ. ಶ್ವಾಸನಾಳದಲ್ಲಿ ಕಫ ಶೇಖರಣೆಯಾಗುವುದನ್ನು ತಡೆಯುವ ಅರಿಶಿನ ಹಾಲು ಕಿರಿಕಿರಿ ಉಂಟು ಮಾಡುವ ಗಂಟಲಿಗೆ ಶಮನವನ್ನು ನೀಡುತ್ತದೆ. ಇದರಿಂದ ಕಫ ಕಡಿಮೆಯಾಗಿ ಕಟ್ಟಿದ ಮೂಗು ತೆರೆಯುವುದು.

ಅರಿಶಿನ ಹಾಲಿನಲ್ಲಿ ಸಕಲ ನೋವುಗಳನ್ನು ನಿವಾರಿಸಬಲ್ಲ ಶಕ್ತಿ



ಯಿದೆ. ಇದು ದೇಹದಲ್ಲಿ ಬೆನ್ನುಮೂಳೆ ಮತ್ತು ಕೀಲುಗಳನ್ನು ಬಲಪಡಿಸುತ್ತದೆ.

ಅರಿಶಿನ ರಾಡಿಕಲ್‌ಗೆ ಉತ್ಕರ್ಷಣ ಸ್ವತಂತ್ರ ಹೋರಾಡುವ ನಿರೋಧಕಗಳ ಅತ್ಯುತ್ತಮ ಮೂಲವಾಗಿದೆ. ಇದರಿಂದ ಅನೇಕ ರೋಗಗಳನ್ನು ಗುಣಪಡಿಸಬಹುದು.

ಅರಿಶಿನ ಹಾಲು ಆಹಾರದಲ್ಲಿರುವ ಕೊಬ್ಬಿನ ಅಂಶವನ್ನು ಕಡಿಮೆ ಮಾಡುತ್ತದೆ. ಈ ತೂಕವನ್ನು ನಿಯಂತ್ರಿಸಲು ಉಪಯೋಗಕಾರಿಯಾಗಿದೆ.

ಎಸ್ಕಿಮಾ ಚಿಕಿತ್ಸೆಗೆ ಅರಿಶಿನ ಹಾಲನ್ನು ಕುಡಿಯುವುದು ಉತ್ತಮ. ಹೊಳೆಯುವ ಚರ್ಮಕ್ಕಾಗಿ ಅರಿಶಿನ ಹಾಲನ್ನು ಕುಡಿಯುವುದು ಒಳಿತು.ಅರಿಶಿನದಲ್ಲಿ ಆಂಟಿಬೈಯಾಟಿಕ್ ಅಂಶ ಇರುವುದರಿಂದ ಹತ್ತಿಯನ್ನು ಅರಿಶಿನ ಹಾಲಿನಲ್ಲಿ ನೆನೆಸಿ ಚರ್ಮ ಕೆಂಪಾಗಿರುವ ಜಾಗದಲ್ಲಿ ಒತ್ತಿ 15 ನಿಮಿಷಗಳ ಕಾಲ ಬಿಟ್ಟರೆ ಬಹಳ ಬೇಗ ಗುಣವಾಗುತ್ತದೆ. ಮತ್ತು ಮೊದಲಿಗಿಂತಲೂ ಚರ್ಮ ಹೊಳೆಯುವಂತೆ ಮಾಡುತ್ತದೆ.

# ಮಾಂಗಲ್ಯ ಧಾರವಾಹಿಗೆ ಪ್ರೇಕ್ಷಕರ ಮೆಚ್ಚುಗೆ

ಇತ್ತೀಚೆಗಷ್ಟೇ ಪ್ರಾರಂಭವಾದ ಉದಯ ವಾಹಿನಿಯ 'ಮಾಂಗಲ್ಯ'ಧಾರವಾಹಿಯು ವೀಕ್ಷಕರಿಂದ ಮೆಚ್ಚುಗೆ ಪಡೆದು ಪ್ರಶಂಸೆಯ ಸುರಿಮಳೆ ಬರುತ್ತಿದೆ. ಹೆಸರಾಂತ ನಟಿ ಸುಧಾರಾಣಿ ಮನಸ್ಸಿಗೆ ನಾಟುವಂತೆ ನಿರೂಪಣೆ ಮಾಡಿರುವುದು ವಿಶೇಷ ಅನಿಸಿದೆ. ಸನ್ನಿವೇಶಗಳಲ್ಲಿ ಬರುವ ಸಂಭಾಷಣೆ, ಶ್ರೀಮಂತ ದೃಶ್ಯಗಳು, ಅದಕ್ಕೆ ತಕ್ಕಂತೆ ಕಲಾವಿದರ ನಟನೆ ನೈಜತೆಗೆ ಹತ್ತಿರವಾಗಿದೆ. ಇದರಿಂದ ದಿನದಿಂದ ದಿನಕ್ಕೆ ವೀಕ್ಷಕರಿಗೆ ಸೀರಿಯಲ್ ನೋಡುವ ಕುತೂಹಲ ಹೆಚ್ಚಾಗುತ್ತಿದೆ.

ಇನ್ನು ಕತೆಯ ಕುರಿತು ಹೇಳುವುದಾದರೆ, ದುರ್ಗಾಪುರದ ಬಡತನದಲ್ಲಿ ಬೆಳೆದ ಮಯೂರಿ, ಮನೆ ಮಗನಂತೆ ಶ್ರೀಮಂತ ಕುಟುಂಬದಲ್ಲಿ ಎಲ್ಲಾ ಜವಬ್ದಾರಿ ನಿಭಾಯಿಸುವಂತ ದಿಟ್ಟ ಹುಡುಗಿ. ಆ ಶ್ರೀಮಂತ ಮನೆಯ ಕುಲಪುತ್ರ ತಾರಾಕ್. ಅಮ್ಮನ ಅಹಂಕಾರದ ವರ್ತನೆಗಳು ಅವನಿಗೆ ಹಿಡಿಸುತ್ತಿರುವುದಿಲ್ಲ. ಕಾರಣಾಂತದಿಂದ ಮದ್ಯವ್ಯಸನಿಯಾಗಿರುತ್ತಾನೆ. ಒಳ್ಳೆ ಮನಸ್ಸಿನ ಕುಡುಕ ಒಂದು ಸಂದರ್ಭದಲ್ಲಿ ಅಮ್ಮನ ಅಹಂಕಾರವನ್ನು ಮುರಿಯಲು ಮಯೂರಿಗೆ ತಾಳಿ ಕಟ್ಟುತ್ತಾನೆ. ಅಲ್ಲಿಂದ ಆಕೆಯ ಜೀವನದ ಹೊಸ ಪಯಣ ಶುರುವಾಗುತ್ತದೆ.

ಕರ್ನಾಟಕದಾದ್ಯಂತ ಹೆಸರು ಮಾಡಿರುವ ಬಿಗ್‌ಬಾಸ್‌ನ ಜಗನ್ ನಾಯಕನ ಪಾತ್ರವನ್ನು ನಿಭಾಯಿಸುವುದಲ್ಲದೆ, ನಿರ್ಮಾಣ ಮಾಡಿ, ನಿರ್ದೇಶನದಲ್ಲೂ ಸೈ ಅನಿಸಿಕೊಂಡಿದ್ದಾರೆ. ಗಂಡನನ್ನು ಸರಿದಾರಿಗೆ ತರುವ ಪಾತ್ರದಲ್ಲಿ ನಾಯಕಿ ಐಶ್ವರ್ಯ ಪಿಸ್ಸೆ ದಿಟ್ಟತನದ ಅಭಿನಯ, ಇಂದಿನ ಮಹಿಳೆಯರಿಗೆ ಧೈರ್ಯ ತುಂಬಲು ಸಹಕಾರಿಯಾಗಿದೆ. ಇವರೊಂದಿಗೆ ಜಾನ್ಸಿ, ಬಿ.ಎಂ.ವೆಂಕಟೇಶ್,



ಇಂಚರ, ದಿಶಾ, ಹನುಮಂತು, ಜಯಬಾಲು, ಚಿತ್ರಾ, ರೂಪೇಶ್, ದಾಮಿನಿ ಮುಂತಾದವರು ತಮ್ಮ ಪಾತ್ರಕ್ಕೆ ನ್ಯಾಯ ಒದಗಿಸಿದ್ದಾರೆ.

ನವೀನ್ ಸೋಮನಹಳ್ಳಿ ಸಂಚಿಕೆ ನಿರ್ದೇಶನವಿದೆ. ಛಾಯಾಗ್ರಹಣ ಮಂಜು, ಸಂಕಲನ ಧನು ಅವರದಾಗಿದೆ. ಧಾರವಾಹಿಯು ಪ್ರತಿ ಸೋಮವಾರದಿಂದ ಶನಿವಾರದವರೆಗೆ ಸಂಜೆ 7 ಗಂಟೆಗೆ ಉದಯ ಟಿವಿದಲ್ಲಿ ಪ್ರಸಾರವಾಗುತ್ತಿದೆ.

# ನಾಗಮೋಹನದಾಸ ವರದಿಯಲ್ಲಿ ಸ್ಪರ್ಶ,ಅಸ್ಪೃಶ್ಯ ಪದ ತೆಗೆಯಲು ಆಗ್ರಹ

**ಇಂಡಿ,ಸೆ.5–** ನ್ಯಾಯಮೂರ್ತಿ ನಾಗಮೋಹನದಾಸ ವರದಿಯಲ್ಲಿ ಉಲ್ಲೇಖಿಸಿರುವ ಸ್ಪರ್ಶ ಹಾಗೂ ಅಸ್ಪೃಶ್ಯ ಪದಗಳನ್ನು ತಕ್ಷಣ ತೆಗೆಯುವುವಂತೆ ಆಲ್ ಇಂಡಿಯಾ ಬಂಜಾರ ಸಂಘದ ಆಗ್ರಹಿಸಿದೆ.

ನ್ಯಾಯಮೂರ್ತಿ ನಾಗಮೋಹನದಾಸ ಆಯೋಗದ ವರದಿಯಲ್ಲಿಲಂಬಾಣಿ, ಕೊರಚಾ, ಕೊರಮ, ಭೋವಿ, ಅಲೆಮಾರಿ ಅಥವಾ ಅರೆ ಅಲೆಮಾರಿ ಸಮುದಾಯದವರಿಗೆ ಸ್ಪರ್ಶ ಸಮುದಾಯಗಳೆಂದು ಪ್ರವರ್ಗ ಎ, ಮತ್ತು ಬಿ ಸಮುದಾಯದವರನ್ನು ಅಸ್ಪೃಶ್ಯ ಸಮುದಾಯದವರು ಎಂದು ಅಸಂವಿಧಾನಿಕ ಹಾಗೂ ಕಾನೂನು ವಿರೋಧಿ ಪದಗಳನ್ನು ಈ ವರದಿಯಲ್ಲಿ ಉಪಯೋಗಿಸಿರುವುದಕ್ಕೆ ತೀವ್ರ ವಿರೋಧವಿದೆ ಎಂದು ಸಂಘ ಹೇಳಿದೆ. ಈ ಕುರಿತು ತಾಲೂಕು ಆಡಳಿತ ಮೂಲಕ ಮುಖ್ಯ ಮಂತ್ರಿ ಸಿದ್ದರಾಮಯ್ಯಗೆ ಮನವಿ ಸಲ್ಲಿಸಿದ ಸಂಘವು ಲಂಬಾಣಿ, ಕೊರಚಾ, ಕೊರಮ, ಭೋವಿ, ಅಲೆಮಾರಿ ಅಥವಾ ಅರೆ ಅಲೆಮಾರಿ ಸಮುದಾಯದವರಿಗೆ ವಿಮುಕ್ತ ಸಮುದಾಯಗಳು ಎಂದು ಮಾರ್ಪಡಿಸಿ ದಾಖಲೀಕರಿಸಬೇಕಾಗಿ ಮನವಿ ಮಾಡಿದೆ.

ಭಾರತದ ಸಂವಿಧಾನವು, ವಿಧಿ 17 ರ ಮೂಲಕ, ಅಸ್ಪೃಶ್ಯತೆಯನ್ನು ಮತ್ತು ಅದರ ಎಲ್ಲಾ ರೂಪಗಳಲ್ಲಿ ರದ್ದುಗೊಳಿದೆ. ಇದು ಕಾನೂನುಬಾಹಿರ ಮಾತ್ರವಲ್ಲದೆ ಶಿಕ್ಷಾರ್ಹ ಎಂದು ಘೋಷಿಸಿದೆ. ಅಧಿಕೃತ ಆಯೋಗಗಳು ಈ ಪರಿಭಾಷೆಯನ್ನು ಪುನರುಜ್ಜೀವನಗೊಳಿಸುವುದು ಸಾಂವಿಧಾನಿಕ ಆದೇಶಕ್ಕೆ ವಿರುದ್ಧವಾಗಿದೆ.

ಕರ್ನಾಟಕ ರಾಜ್ಯ ವಿರುದ್ಧ ಅಪ್ಪ ಬಾಲು ಇಂಗಳೆ (1995) ಪ್ರಕರಣದಲ್ಲಿ, ಸ್ವತಂತ್ರ ಭಾರತದಲ್ಲಿ ಅಸ್ಪೃಶ್ಯತೆಗೆ ಸ್ಥಾನವಿಲ್ಲ ಎಂದು ಸುಪ್ರೀಂ ಕೋರ್ಟ್ ಸ್ಪಷ್ಟಪಡಿಸಿದೆ. ಮೀಸಲಾತಿಗಳ ಉಪ-ವರ್ಗೀಕರಣದ ನೆಪದಲ್ಲಿಯೂ ಸಹ, ಅಂತಹ ಅಸಂವಿಧಾನಿಕ ವರ್ಗಗಳನ್ನು ಮರುಪರಿಚಯಿಸುವ ಅಧಿಕಾರ ಯಾವುದೇ





ಆಯೋಗ ಅಥವಾ ರಾಜ್ಯ ಸಂಸ್ಥೆಗೆ ಇಲ್ಲ.

"ಸ್ಪಶ್ಯ ಮತ್ತು "ಅಸ್ಪೃಶ್ಯ" ಈ ಪದಗಳನ್ನು ಮತ್ತೆ ಬಳಸಲು ಪ್ರಾರಂಭಿಸಿದರೆ, ಅದೇ ಅನ್ಯಾಯವನ್ನು ಹೊಸ ರೂಪದಲ್ಲಿ ಪುನರಾವರ್ತಿಸುವುದಾಗಿದೆ. ಅದರಲ್ಲೂ, ಅಧಿಕೃತ ವರದಿಗಳಲ್ಲಿ ಬಳಸಿದಾಗ, ಅವು ತಾರತಮ್ಯವನ್ನು ಕಾನೂನುಬದ್ಧಗೊಳಿಸುವ, ಪರಿಶಿಷ್ಟ ಜಾತಿಗಳಲ್ಲಿ ಹೊಸ ಶ್ರೇಣಿಗಳನ್ನು ಸೃಷ್ಟಿಸುವ ಮತ್ತು ಬಂಜಾರ ಮತ್ತು ಭೋವಿಯಂತಹ ಇನ್ನಿತರ ಸಮುದಾಯಗಳ ಪರಿಶಿಷ್ಟ ಜಾತಿ ಸ್ಥಾನಮಾನವನ್ನು ಪ್ರಶ್ನಿಸುವ ಪ್ರಯತ್ನಗಳಂತಹ ವಿಭಜಕ ಕಾರ್ಯಸೂಚಿಗಳಿಗೆ ದಾರಿ ಮಾಡಿಕೊಡುವ ಅಪಾಯವನ್ನುಂಟುಮಾಡುತ್ತವೆ.ಇಂಥ ನಡೆ ದಲಿತರನ್ನು ವಿಭಜಿಸುವುದು ಮತ್ತು ಅವರಿಗೆ ದೊರೆಯುವ ಪ್ರಯೋಜನಗಳನ್ನು ನಿಯಂತ್ರಿಸುವ ಮೂಲಕ ಅವರನ್ನು ಮತ್ತೆ ಅಧಃಪತನಕ್ಕೆ ತಳ್ಳಲು ಒಂದು ರಾಜಕೀಯ ಆಟವಾಗಿದೆ.

ಮೂಲಭೂತವಾಗಿ, ಈ ಸಮುದಾಯಗಳ ಸೇರ್ಪಡೆಯು ಆಕಸ್ಮಿಕವಲ್ಲ. ಈ ಮೊದಲು ಮಿಲ್ಲರ್ ಆಯೋಗದಿಂದ, ನಂತರ ಬ್ರಿಟಿಷ್ ಕಾನೂನಿನಿಂದ ಮತ್ತು ಅಂತಿಮವಾಗಿ ಭಾರತದ ಸಂವಿಧಾನದಿಂದ  ಈ ಸಮುದಾಯಗಳು ಸಾಂವಿಧಾನಿಕ ರಕ್ಷಣೆಗೆ ಅಗತ್ಯವಿರುವ ಎಲ್ಲ ಮಾನದಂಡಗಳ ಪರಧಿಯೊಳಗೆ ಒಳಗೊಂಡಿವೆ ಎಂಬುದು ಸ್ಪಷ್ಟವಾಗಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ

# 5 ಲಕ್ಷ ರೂ.ವರೆಗೆ ಯುಪಿಐ ವಹಿವಾಟಿಗೆ ಅವಕಾಶ




**ನವದೆಹಲಿ, ಸೆ.5–** ಡಿಜಿಟಲ್ ಪಾವತಿಗಳ ಬಳಕೆ ದಿನೇದಿನೇ ವಿಸ್ತರಿಸುತ್ತಿರುವ ಹಿನ್ನೆಲೆಯಲ್ಲಿ ಯುಪಿಐ ಬಳಕೆದಾರರಿಗೆ ಭಾರತೀಯ ರಾಷ್ಟ್ರೀಯ ಪಾವತಿ ನಿಗಮ ಮಹತ್ವದ ನಿರ್ಧಾರ ಕೈಗೊಂಡಿದ್ದು, ಇತ್ತೀಚಿನವರೆಗೂ ಒಂದೇ ಬಾರಿ ಗರಿಷ್ಠ 1 ಲಕ್ಷ ರೂಪಾಯಿ ಪಾವತಿ ಮಿತಿ ಇತ್ತು. ಈಗ ಮಿತಿಯನ್ನು 5 ಲಕ್ಷ ರೂಪಾಯಿಗೆ ಏರಿಸಲಾಗಿದೆ. ಜೊತೆಗೆ, ದಿನವೊಂದಕ್ಕೆ ಗರಿಷ್ಠ 10 ಲಕ್ಷ ರೂಪಾಯಿವರೆಗೆ ವಹಿವಾಟು ನಡೆಸಲು ಅವಕಾಶ ನೀಡಲಾಗಿದೆ.

ಈ ಹೊಸ ಪಾವತಿ ಮಿತಿಗಳು ಸೆಪ್ಟೆಂಬರ್ 15ರಿಂದಲೇ ಜಾರಿಯಾಗಲಿವೆ. ತೆರಿಗೆ ಪಾವತಿ, ಸಾಲದ ಇಎಂಐ, ದೈನಂದಿನ ವಹಿವಾಟು ಮುಂತಾದ ಪ್ರಮುಖ ಹಣಕಾಸು ವ್ಯವಹಾರಗಳಲ್ಲಿ ಗ್ರಾಹಕರಿಗೆ ಇದರಿಂದ ದೊಡ್ಡ ಮಟ್ಟದಲ್ಲಿ ಅನುಕೂಲವಾಗಲಿದೆ.

ಆದರೆ, ಈ ಹೆಚ್ಚುವರಿ ಮಿತಿ ವ್ಯಾಪಾರಿಗಳಿಗೆ (B2B) ಮಾಡುವ ಪಾವತಿಗಳಿಗೆ ಮಾತ್ರ ಅನ್ವಯವಾಗುತ್ತದೆ. ವ್ಯಕ್ತಿಯಿಂದ ವ್ಯಕ್ತಿಗೆ (P2P) ಮಾಡುವ ಪಾವತಿಗೆ ಮಿತಿಯು ಹಳೆಯದಂತೆ 1 ಲಕ್ಷ ರೂಪಾಯಿ ಮುಂದುವರಿಯಲಿದೆ ಎಂದು ನಿಗಮ ತಿಳಿಸಿದೆ.

ಡಿಜಿಟಲ್ ಪಾವತಿಯ ಬಳಕೆಯ ಹೆಚ್ಚಳಕ್ಕೆ ಸಾಕ್ಷಿಯಾಗಿ, ಈ ವರ್ಷ ಆಗಸ್ಟ್ ತಿಂಗಳಲ್ಲಿ 2,000 ಕೋಟಿಗೂ ಅಧಿಕ ಯುಪಿಐ ವಹಿವಾಟುಗಳು ನಡೆದಿದ್ದು, ಇದರ ಒಟ್ಟು ಮೊತ್ತ 24.85 ಲಕ್ಷ ಕೋಟಿ ರೂಪಾಯಿ ತಲುಪಿದೆ. ಹಿಂದಿನ ವರ್ಷಕ್ಕೆ ಹೋಲಿಕೆ ಮಾಡಿದರೆ, ಆಗಸ್ಟ್ ತಿಂಗಳಲ್ಲಿ ಯುಪಿಐ ವಹಿವಾಟಿನಲ್ಲಿ 34% ಏರಿಕೆ ದಾಖಲಾಗಿದೆ.

# ಅಲ್ಲಮಪ್ರಭು ಪಾಟೀಲ, ಎಂ.ವೈ.ಪಾಟೀಲ ಮೇಘಾಲಯ ಭೇಟಿ



**ಕಲಬುರಗಿ,ಸೆ.5–**ಕರ್ನಾಟಕ ವಿಧಾನಸಭೆಯ ಸಾರ್ವಜನಿಕ ಉದ್ಯಮಗಳ ಸಮಿತಿಯು ಸಮಿತಿಯಲ್ಲಿರುವ ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ್, ಅಫಜಲಪುರ ಶಾಸಕ ಎಂ.ವೈ.ಪಾಟೀಲ ಸಮಿತಿ ಅಧ್ಯಕ್ಷ ಬಸವರಾಜ ನೀಲಪ್ಪ ಶಿವಣ್ಣನವರ್ ಮತ್ತು ಸಮಿತಿ ಸದಸ್ಯರಾದ ಆರಗ ಜ್ಞಾನೇಂದ್ರ, ಉಮಾಶ್ರೀ ಹಾಗೂ ಭಾರತಿಶೆಟ್ಟಿ ಅವರನ್ನು ಒಳಗೊಂಡ ತಂಡ ಮೇಘಾಲಯ ವಿಧಾನಸಭೆಯ ಸಭಾಧ್ಯಕ್ಷರಾದ ಥಾಮಸ್ ಎ.ಸಂಗ್ಮಾ ಮತ್ತು ಉಪಸಭಾಧ್ಯಕ್ಷರಾದ ಟಿ.ಡಿ.ಶಿರ ಅವರನ್ನು ಭೇಟಿ ಮಾಡಿತು.

ಇದೇ ಸಂದರ್ಭದಲ್ಲಿ ಮೇಘಾಲಯದ ಸಾರ್ವಜನಿಕ ಉದ್ದಿಮೆಗಳ ಸಮಿತಿಯ ಕಾರ್ಯವಿಧಾನದ ಬಗ್ಗೆ ಮತ್ತು ಮೇಘಾಲಯದ ವಿವಿಧ ವಲಯಗಳ ವಿದ್ಯಮಾನಗಳ ಬಗ್ಗೆ ಸಮಿತಿ ಅವರೊಂದಿಗೆ ಚರ್ಚಿಸಿತು.

ಕರ್ನಾಟಕ ವಿಧಾನಸಭೆಯ ಸಾರ್ವಜನಿಕ ಉದ್ದಿಮೆಗಳ ಸಮಿತಿಯ ಉಪಕಾರ್ಯದರ್ಶಿಯವರು ಸಮಿತಿಯ ಕಾರ್ಯವಿಧಾನ ಮತ್ತು ವಿಧಾನಸಭೆಯ ಕಾರ್ಯವಿಧಾನದ ನಿಯಮಗಳ ಪುಸ್ತಕಗಳನ್ನು ಮೇಘಾಲಯ ವಿಧಾನಸಭಾಧ್ಯಕ್ಷರಿಗೆ ಸಲ್ಲಿಸಿದರು.

# ಬಿಎಸ್‌ಎಸ್‌ಕೆ ಕಾರ್ಖಾನೆ ಆರಂಭಿಸದಿದ್ದರೆ ಹೋರಾಟ



**ಬೀದರ,ಸೆ.5–** ಬಿಎಸ್‌ಎಸ್‌ಕೆ ಕಾರ್ಖಾನೆ 173.35 ಎಕರೆ ಜಮೀನು ಹೊಂದಿದೆ. ಡಿಸಿಸಿ ಬ್ಯಾಂಕ್‌ನವರಿಗೆ ಸುಮಾರು ಏಳೆಂಟು ಬಾರಿ ಪತ್ರಬರೆದು ಸಾಲಗಳ ಮೇಲಿನ ಬಡ್ಡಿ ಮನ್ನಾ ಮಾಡುವಂತೆ ಕೋರಲಾಗಿದೆ. ಲೀಜ್‌ನಿಂದ ಬರುವ ಹಣದಿಂದ ಸಾಲ ಪಾವತಿ ಮಾಡಲಾಗುವುದು ಎಂದು ವಿನಂತಿ ಕೂಡ ಮಾಡಿಕೊಳ್ಳಲಾಗಿದೆ. ಆದರೆ ನಮ್ಮ ಚುನಾಯಿತ ಆಡಳಿತ ಮಂಡಳಿಯವರಿಗೂ ತಿಳಿಸದೆ ಬ್ಯಾಂಕ ಅಧ್ಯಕ್ಷ ಅಮರ ಖಂಡ್ರೆಯವರು 2024ರ ಆಗಸ್ಟ್ 2ರಂದು ಕಬ್ಜೆಗೆ ಪಡೆದು ಡಿಸೆಂಬರ್ 16 ರಂದು 184 ಕೋಟಿ ರೂಪಾಯಿಗೆ ಹರಾಜು ಮಾಡಿದ್ದಾರೆ ಎಂದು ಕಾರ್ಖಾನೆ ಅಧ್ಯಕ್ಷ ಸುಭಾಷ ಕಲ್ಲೂರ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಉಸ್ತುವಾರಿ ಸಚಿವರಾಗಿ, ತಮ್ಮ ಮಗ ಸಂಸದರಾಗಿ ಇಟ್ಟುಕೊಂಡು, ಡಿಸಿಸಿ ಬ್ಯಾಂಕ್ ಅಧ್ಯಕ್ಷ ನಿಮ್ಮ ಸಹೋದರರಿದ್ದರೂ ಕೂಡಾ ಒಂದು ರೈತರ ಜೀವನಾಡಿ ಬಿಎಸ್‌ಎಸ್‌ಕೆ ಕಾರ್ಖಾನೆ ಆರಂಭ ಮಾಡಲು ಸಾಧ್ಯವಾಗಿದ್ದರೆ ಹೇಗೆ ಎಂದು ಖಾರವಾಗಿಯೇ ಸಚಿವರಿಗೆ ಪ್ರಶ್ನೆ ಮಾಡಿದ್ದಾರೆ.

ಮುಂದುವರೆದು ಮಾತನಾಡಿದ ಕಲ್ಲೂರ ಅವರು ಈ ಹಿಂದೆ ಕಾರ್ಖಾನೆಯನ್ನು ಲೀಜ್‌ಗೆ ಪಡೆಯಲು ಇಬ್ಬರು ಮೂವರು ಬಿದಾರರು ಬಂದು ಜಿಲ್ಲಾ ಉಸ್ತುವಾರಿ ಸಚಿವರಿಗೆ ಹಾಗೂ ಸಕ್ಕರೆ ಸಚಿವರಿಗೆ ಭೇಟಿ ಮಾಡಿ ಮೊದಲಿಗೆ 40 ಕೋಟಿ ಹಣ ಪಾವತಿ ಮಾಡಿ, ನಂತರ ಪ್ರತೀ ವರ್ಷಕ್ಕೆ 8 ಕೋಟಿ ಹಣ ಪಾವತಿಸುವುದಾಗಿ ಹೇಳಿದರೂ ಕೂಡಾ ಉದ್ದೇಶಪೂರ್ವಕವಾಗಿಯೇ ಸಚಿವರು ಮುಂದೂಡುತ್ತಿದ್ದಾರೆ ಎನ್ನುವ ಅನುಮಾನ ಕಾಡುತ್ತಿದೆ ಎಂದು ಕಲ್ಲೂರ ತಿಳಿಸಿದರು. ಕೆಲವು ತಿಂಗಳ ಹಿಂದೆ ವಿಧಾನಸೌಧದಲ್ಲಿ ಸಕ್ಕರೆ ಸಚಿವ ಶಿವಾನಂದ ಪಾಟೀಲ, ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹಾಗೂ ಆಯುಕ್ತರು, ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ ಸಭೆ ನಡೆಯಿತು. ಆಗ ಜಿಲ್ಲಾ ಉಸ್ತುವಾರಿ ಸಚಿವರು ಓಟಿಎಸ್ ಯೋಜನೆ ಅಡಿಯಲ್ಲಿ ಪಾವತಿಸಲು ಎನ್‌ಸಿಡಿಸಿ ಯಿಂದ ಸಾಲ ಪಡೆದು ಡಿಸಿಸಿ ಬ್ಯಾಂಕ್ ಮತ್ತು ಅಪೆಕ್ಸ್ ಬ್ಯಾಂಕ್‌ನ ಸಾಲಗಳನ್ನು ಪಾವತಿಸಲು ಸರ್ಕಾರದ ಖಾತ್ರಿ ನೀಡುವಂತೆ ಸಿಎಂ ಅವರಿಗೆ ಭೇಟಿಯಾಗಿ ಕೋರಲು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮೂರು ದಿನಗಳಲ್ಲಿ ನಾನೇ ಸಮಯ ತೆಗೆದುಕೊಳ್ಳುತ್ತೇನೆ ಎಂದು ಹೇಳಿ ಸುಮಾರು 70 ದಿವಸ ಕಳೆದರೂ ಸಚಿವರು ಕ್ಯಾರೇ ಎನ್ನುತ್ತಿಲ್ಲ. ನಾವು ಕೇಳಿದಾಗಲೆಲ್ಲ ಎರಡ್ಮೂರು ದಿನಗಳಲ್ಲಿ ಸಮಯ ತೆಗೆದುಕೊಳ್ಳುವೆ ಎಂದು ಸಬೂಬು ಹೇಳುತ್ತಿದ್ದಾರೆ ಎಂದು ಹೇಳಿದರು.

ಕಾರ್ಖಾನೆಯಲ್ಲಿ ಎಥೆನಾಲ್ ಮತ್ತು ಕೋಜನ್ ಘಟಕ ಸ್ಥಾಪಿಸಲು ಎನ್‌ಸಿಡಿಸಿ ಯಿಂದ ರೂ. 550 ಕೋಟಿ ಸಾಲಕ್ಕಾಗಿ ನಾವು ಸಕ್ಕರೆ ಸಚಿವರಿಗೆ ಕೋರಲಾಗಿದೆ. ಅವರ ಶಿಫಾರಸ್ಸಿನ್ ಮೇರೆಗೆ ಎನ್‌ಸಿಡಿಸಿ ಯಿಂದ 550 ಕೋಟಿ ಸಾಲ ಮಂಜೂರಿ ಮಾಡಿ 06–08–2025 ರಂದು ಕರ್ನಾಟಕ ಸರ್ಕಾರಕ್ಕೆ ಪತ್ರ ಬರೆದಿರುತ್ತಾರೆ. ಈ ಸಾಲವನ್ನು ಕರ್ನಾಟಕ ಸರ್ಕಾರ ಪಡೆದು ಕಾರ್ಖಾನೆಗೆ ಪಾವತಿ ಮಾಡುವಂತೆ ತಿಳಿಸಿರುತ್ತಾರೆ. ಈ ಪತ್ರವನ್ನು ಸಚಿವ ಈಶ್ವರ ಖಂಡ್ರೆಯವರಿಗೆ ನೀಡಿ, ಎನ್‌ಸಿಡಿಸಿ ಸಾಲವನ್ನು ಸರ್ಕಾರದಿಂದ ಪಡೆದು ಕಾರ್ಖಾನೆಗೆ ವರ್ಗಾಯಿಸುವಂತೆ ಕೋರಿದ್ದೇವೆ. ಸಿಎಂ ಅವರಿಗೆ ಭೇಟಿಯಾಗಿ ಮುಂದಿನ ಕ್ರಮ ಕೈಗೊಳ್ಳುವುದಾಗಿ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಆದರೆ ಇಲ್ಲಿವರೆಗೆ ಇದರ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಜಿಲ್ಲೆಯ ರೈತರು, ಕಾರ್ಮಿಕರು ಸಂಕಷ್ಟದಲ್ಲಿದ್ದಾರೆ. ಅವರ ಹಿತಾಸಕ್ತಿ ಕಾಪಾಡುವಲ್ಲಿ ಉಸ್ತುವಾರಿ ಸಚಿವರು ವಿಳಂಬ ಮಾಡುತ್ತಿದ್ದಾರೆ. ಈ ವರ್ತನೆಯಿಂದ ನಾವು ಬೇಸತ್ತು ಅನಿವಾರ್ಯವಾಗಿ ಪತ್ರಿಕಾಗೋಷ್ಠಿ ಕರೆದಿದ್ದೇವೆ. ಕಾರ್ಖಾನೆ ಆರಂಭಕ್ಕಾಗಿ ಕೇಂದ್ರ ಸರ್ಕಾರಕ್ಕೂ ಮನವಿ ಸಲ್ಲಿಸುತ್ತೇವೆ. ಕಾರ್ಖಾನೆಗೂ ನಮಗೂ ಭಾವನಾತ್ಮಕ ಸಂಬಂಧವಿದೆ ಎಂದು ಹೇಳುವ ಖಂಡ್ರೆಯವರು ಅದೇ ಕಾರ್ಖಾನೆ ಆರಂಭಕ್ಕೆ ಮೀನಾಮೇಷ ಎಣಿಸುತ್ತಿರುವುದು ನಿಜಕ್ಕೂ ಖೇದಕರ. ಒಂದು ಕಾರ್ಖಾನೆಯನ್ನು ಲೀಜ್‌ಗೆ ಕೊಡಿ. ಇಲ್ಲ ಅನುದಾನ ನೀಡಿ. ಇಲ್ಲ ಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಮರ ಖಂಡ್ರೆ ರಾಜೀನಾಮೆ ನೀಡಿ ಎಂದು ಒತ್ತಾಯಿಸಿದರು. ಬಿಎಸ್‌ಎಸ್‌ಕೆ ಕಾರ್ಖಾನೆಯನ್ನು ಯಾವುದೇ ಕಾರಣಕ್ಕೂ ಮಾರಲು ನಾವು ಬಿಡುವುದಿಲ್ಲ. ಈ ಎಲ್ಲಾ ಸಮಗ್ರ ವಿಷಯಗಳು ರೈತರ ಗಮನಕ್ಕೆ ತರುತ್ತಿದ್ದೇವೆ. ಮುಂದಿನ ದಿನಗಳಲ್ಲಿ ಉಸ್ತುವಾರಿ ಸಚಿವರು ಕಾರ್ಖಾನೆ ಆರಂಭಕ್ಕೆ ಸಹಕಾರ ನೀಡದಿದ್ದರೆ ರೈತರೊಂದಿಗೆ ಉಗ್ರ ಹೋರಾಟ ಮಾಡಲಾಗುವುದು ಎಂದು ಕಲ್ಲೂರ ಎಚ್ಚರಿಸಿದರು.

ಇದೇ ವೇಳೆ ಪತ್ರಿಕಾಗೋಷ್ಠಿಯಲ್ಲಿ ಕಾರ್ಖಾನೆಯ ಉಪಾಧ್ಯಕ್ಷರಾದ ವಿಶ್ವನಾಥ ಪಾಟೀಲ ಮಾಡಗೂಳ, ನಿರ್ದೇಶಕರಾದ ಮಲ್ಲಿಕಾರ್ಜುನ ಪಾಟೀಲ ಚಿಟಗುಪ್ಪ, ಬಕ್ಕಪ್ಪ ಬಸರೆಡ್ಡಿ, ಅಪ್ಪಾರಾವ ಡಾಕುಳಗಿ, ರಾಜಪ್ಪ ಶೇರಿಕಾರ್ ಉಪಸ್ಥಿತರಿದ್ದರು.

# ತರಬೇತಿ ಪೂರ್ಣಗೊಳಿಸಿದ ಯುವತಿಯರಿಗೆ ಪ್ರಮಾಣ ಪತ್ರ ಮತ್ತು ಹೊಲಿಗೆ ಯಂತ್ರ ವಿತರಣೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಸೆ.5–** ವಿವೇಕ ಗ್ರಾಮೀಣ ಜೀವನಾದಾರ ಕೇಂದ್ರ ಮತ್ತು ಟೆಕ್ಸಸ್ ಇನ್ಸ್ಟುಮೆಂಟ್ ಬೆಂಗಳೂರು ಇವರ ಸಹಯೋಗದಲ್ಲಿ ನಡೆದ ಮೂರು ತಿಂಗಳ ಫ್ಯಾಷನ್ ಡಿಸೈನಿಂಗ್ ಮತ್ತು ಬ್ಯೂಟಿಷಿಯನ್ ತರಬೇತಿ ಪೂರ್ಣಗೊಳಿಸಿದ ಯುವ ತಿಯರಿಗೆ ಪ್ರಮಾಣ ಪತ್ರ ವಿತರಣೆ ಮತ್ತು ಹೊಲಿಗೆ ಯಂತ್ರ ವಿತರಣಾ ಕಾರ್ಯಕ್ರಮವನ್ನು ಇತ್ತೀಚೆಗೆ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಸ್ವಾಮಿ ವಿವೇಕಾನಂದ ಯೂಥ್ ಮೂವ್ಮೆಂಟ್ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕವಿತಾ ಮೈಸೂರು ಅವರು, ಮೂವರು ಯುವತಿಯರಿಗೆ ಹೊಲಿಗೆ ಯಂತ್ರಗಳನ್ನು ವಿತರಿಸಿ ಮಾತನಾಡಿದರು. ಕಳೆದ ಎರಡು ವರ್ಷಗಳಿಂದ ಈ ಭಾಗದ ನೂರಕ್ಕೂ ಹೆಚ್ಚು ನಿರುದ್ಯೋಗಿ ಮಹಿಳೆಯರಿಗೆ ಸ್ವಾವಲಂಬಿ ಜೀವನಕ್ಕೆ ದಾರಿದೀಪವಾಗಲು ಇಂತಹ ಹಲವು ತರಬೇತಿಗಳನ್ನು ಸಂಸ್ಥೆ ನಡೆಸುತ್ತಾ ಬಂದಿದೆ ಎಂದು ಅವರು ತಿಳಿಸಿದರು.

"ಕಲಿತ ವಿದ್ಯೆಯನ್ನು ನಿಮ್ಮ ಬದುಕು ರೂಪಿಸಿಕೊಳ್ಳಲು ಬಳಸಿಕೊಳ್ಳಿ. ನಿಮ್ಮ ದುಡಿಮೆಯಿಂದ ಬಂದ ಹಣವನ್ನು ನಿಮ್ಮ ಮಕ್ಕಳ ಉತ್ತಮ ಶಿಕ್ಷಣಕ್ಕಾಗಿ ಉಪಯೋಗಿಸಿ ಅವರನ್ನು ಉತ್ತಮ ಪ್ರಜೆಗಳನ್ನಾಗಿ ಮಾಡಿ," ಎಂದು ಕವಿತಾ ಮೈಸೂರು ಯುವತಿಯರಿಗೆ ಕರೆ ನೀಡಿದರು. ಸರ್ಕಾರದ ಅನೇಕ ಸಾಲ ಸೌಲಭ್ಯಗಳನ್ನು ಬಳಸಿಕೊಂಡು ಸ್ವಂತ ಉದ್ಯಮ ಆರಂಭಿಸಲು ಅವರು ಪ್ರೇರೇಪಿಸಿದರು. ಈಗಾಗಲೇ ಈ ತರಬೇತಿ ಪಡೆದ ಹಲವರು ಸ್ವಂತ ಅಂಗಡಿಗಳನ್ನು ಪ್ರಾರಂಭಿಸಿ ಯಶಸ್ವಿ ಉದ್ಯಮಿಗಳಾಗಿದ್ದಾರೆ ಎಂದು ಉದಾಹರಣೆ ನೀಡಿದರು.

ಸಂಸ್ಥೆಯ ವ್ಯವಸ್ಥಾಪಕರಾದ ಸುರೇಶ್ ಎಚ್. ಅವರು ಸರ್ಕಾರಿ ಯೋಜನೆಗಳಾದ ಪಿಎಂಇಜಿಪಿ (ಕಓಇಉಕ) ಅಡಿಯಲ್ಲಿ ಸಾಲ



ಪಡೆಯುವ ವಿಧಾನ ಮತ್ತು ಅಗತ್ಯ ದಾಖಲಾತಿಗಳ ಬಗ್ಗೆ ವಿವರವಾದ ಮಾಹಿತಿ ನೀಡಿದರು. ಫ್ಯಾಷನ್ ಡಿಸೈನಿಂಗ್ ತರಬೇತಿ ಪಡೆದವರಿಗೆ ನಗರದ ಗಾರ್ಮೆಂಟ್ಸ್ ಕಂಪನಿಗಳಲ್ಲಿ ಉದ್ಯೋಗ ದೊರಕಿಸಲು ಸಂಸ್ಥೆ ಸಹಕಾರ ನೀಡುತ್ತಿದೆ ಎಂದು ತಿಳಿಸಿದರು. "ತರಬೇತಿಯ ನಂತರ ನಿರಂತರವಾಗಿ ಅಭ್ಯಾಸ ಮಾಡುವುದರಿಂದ ಈ ಕ್ಷೇತ್ರದಲ್ಲಿ ಯಶಸ್ಸು ಗಳಿಸಬಹುದು. ನೀವು ಸ್ವಂತ ಅಂಗಡಿ ತೆರೆದರೆ ಅಥವಾ ಮನೆಯಲ್ಲಿಯೇ ಕೆಲಸ ಪ್ರಾರಂಭಿಸಿದರೆ ಅದುವೇ ಸಂಸ್ಥೆಗೆ ನೀವು ನೀಡುವ ಗುರುದಕ್ಷಿಣೆ," ಎಂದು ಸುರೇಶ್ ಹೇಳಿದರು.

ಕಾರ್ಯಕ್ರಮದ ನಿರೂಪಣೆಯನ್ನು ರೇಣುಕಾ ಪಾಟೀಲ್ ನೆರವೇರಿಸಿದರು. ಹನುಮಂತು, ಸಂಯೋಜಕರು, ಸಿಂಧನೂರು, ಅವರು ಪ್ರಾಸ್ತಾವಿಕ ನುಡಿಗಳನ್ನು ಆಡಿದರು. ನಯನ ಸ್ವಾಗತ ಭಾಷಣ ಮಾಡಿದರು ಮತ್ತು ಈರಣ್ಣ ವಂದನಾರ್ಪಣೆ ಮಾಡಿದರು. ಭೀಮಯ್ಯ, ರಾಜೇಶ್, ಮತ್ತು ಲಿಂಗಪ್ಪ ಸೇರಿದಂತೆ ಸಂಸ್ಥೆಯ ಸಿಬ್ಬಂದಿ ಹಾಗೂ ತರಬೇತಿ ಪಡೆದವರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ದಾನಿಗಳಿಂದ ಪಡೆದ ಮೂರು ಹೊಲಿಗೆ ಯಂತ್ರಗಳನ್ನು ಅರ್ಹ ಫಲಾನುಭವಿಗಳಿಗೆ ಉಚಿತವಾಗಿ ವಿತರಿಸಲಾಯಿತು.

# ಸಂಭ್ರಮದ ಈದ್ ಮಿಲಾದ್ ಆಚರಣೆ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಸೆ.5–** ಇಸ್ಲಾಂ ಧರ್ಮ ಸ್ಥಾಪಕ ಅಲ್ಲಾಹುವಿನ ಪ್ರೀತಿಪಾತ್ರರಾದ ಪ್ರವಾದಿ ಮೊಹಮ್ಮದ್ ರ ಜನ್ಮದಿನದ ನಿಮಿತ್ಯ ಪಟ್ಟಣದಲ್ಲಿ ಮುಸ್ಲಿಂ ಬಾಂಧವರು ಶುಕ್ರವಾರ ಸಂಭ್ರಮದಿಂದ ಈದ್ ಮಿಲಾದ್ ಹಬ್ಬವನ್ನು ಆಚರಣೆ ಮಾಡಿದರು.

ಪಟ್ಟಣದ ರಾಜಾ ಬಾಗ್‌ಸವಾರ ದರ್ಗಾದಿಂದ ಮೆಕ್ಕಾ ಮದೀನಾ ದೇಗುಲಗಳ ಸಬ್ಬ ಚಿತ್ರಗಳೊಂದಿಗೆ ಮುಸ್ಲಿಂ ಮುಖಂಡರು ಜುಲೂಸ್ ಮೆರವಣಿಗೆ ಆರಂಭಿಸಿದರು. ಹನುಮಾನ್ ಚೌಕ್, ಗಡಿಯಾರ ಚೌಕ, ಬಸ್ಟಾಂಡ್ ವೃತ್ತದ ಮೂಲಕ ಜಾಮಿಯಾ ಮಸ್ಟಿದ್‌ಗೆ ಮಧ್ಯಾಹ್ನದ ಹೊತ್ತಿಗೆ ಜುಲೂಸ್ ಆಗಮಿಸಿತು. ಮಧ್ಯಾಹ್ನದ ಜುಮಾ ನಮಾಜ್ ಬಳಿಕ ಬಿರಿಯಾನಿ ಪ್ರಸಾದ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ತಂಜಿಮುಲ್ ಮುಸ್ಲಿಮೀನ್ ಕಮೀಟಿ ಉಪಾಧ್ಯಕ್ಷ ಖಾದರಬಾಷಾ, ಯುವ ಘಟಕದ ಅಧ್ಯಕ್ಷ ಅಹ್ಮದ್ ಚಾವೂಸ್, ಮುಖಂಡರಾದ ಮುಫ್ತಿ ಸೈಯದ್ ಯೂನೂಸ್ ಖಾಸ್ಮಿ, ಹಫೀಜ್ ಫೈಸಲ್ ಮೌಲಾನಾ, ಅನೀಸ್‌ಪಾಷಾ, ನಬಿಸಾಬ,



ಫಯಾಜ್ ಅಹದ್ ಮನಿಯಾರ, ಖಾಜಾಹುಸೇನ್ ಪೂಲವಾಲೆ, ಮಹ್ಮದ್ ಹಾಜಿಬಾಬಾ ಕರಡಕಲ್, ಅಬ್ದುಲ್ ರವೂಫ್ ಗ್ಯಾರಂಟಿ, ಅಕಂಪಾಷಾ, ಜಾಫರ್‌ಹುಸೇನ್, ಮಹೆಬೂಬ, ಇಸ್ಮಾಯಿಲ್, ನವಾಬ್, ಜಿಲಾನಿಪಾಷಾ, ಹುಸೇನ್ ಸಾಬ, ಅಶ್ರಫ್ ಹುಸೇನ್, ಮಹ್ಮದ್ ನೂಮಾನ್, ಮಹ್ಮದ್ ಜೊಹರಾನ್, ಅಮಾನ್, ಫೈಜಾನ್ ಸೇರಿ ಸಾವಿರಾರು ಸಂಖ್ಯೆಯಲ್ಲಿ ಮುಸ್ಲಿಂ ಬಾಂಧವರು ಪಾಲ್ಗೊಂಡಿದ್ದರು.

# ಪತ್ರಿಕಾ ವಿತರಕರಿಗೆ ಸೇವಾ ಭದ್ರತಾ ಸೌಲಭ್ಯಗಳು ದೊರೆಯಲಿ



**ಕಲಬುರಗಿ:ಸೆ.5–** ಜ್ಞಾನದ ನಿಧಿಗಳಾದ ಪತ್ರಿಕೆಗಳನ್ನು ಮಳೆ, ಚಳಿ, ಬಿಸಲು, ಗಾಳಿ, ಹಗಲು, ರಾತ್ರಿಯನ್ನದೇ, ಓದುಗರ ಮನೆ ಬಾಗಿಲಿಗೆ ನೇರವಾಗಿ ತಲುಪಿಸುವ ಮೂಲಕ ಕಾರ್ಯ ಮಾಡುತ್ತಿರುವ ಪತ್ರಿಕೆ ವಿತರಕರಿಗೆ ಸಾಮೂಹಿಕ ವಿಮೆ, ಭವಿಷ್ಯ ನಿಧಿ, ಕನಿಷ್ಠ ವೇತನ ನಿಗದಿಗೊಳಿಸುವಿಕೆ, ಇಎಸ್‌ಐ ಸೌಲಭ್ಯ, ಪಿಎಫ್‌ನಂತಹ ಸರ್ಕಾರಿ ಸೌಲಭ್ಯಗಳು ನೀಡುವ ಮೂಲಕ ಸೇವೆ, ಜೀವನ ಭದ್ರತೆಯನ್ನು ಒದಗಿಸಬೇಕು ಎಂದು ಹಿರಿಯ ಪತ್ರಿಕಾ ವಿತರಕ ರಾಜಶೇಖರ ಚಿನ್ಮಳ್ಳಿ ಸರ್ಕಾರಕ್ಕೆ ಒತ್ತಾಸೆ ಮಾಡಿದರು.

ನಗರದ ಶಹಾಬಜಾರ ಮಹಾದೇವ ನಗರದಲ್ಲಿನ 'ಸ್ವಾತಿ ಪ್ರೌಢಶಾಲೆ'ಯ ಆವರಣದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಗುರುವಾರ ಸಂಜೆ ಜರುಗಿದ 'ವಿಶ್ವ ಪತ್ರಿಕಾ ವಿತರಕರ ದಿನಾಚರಣೆ'ಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮತ್ತೋರ್ವ ಹಿರಿಯ ಪತ್ರಿಕಾ ವಿತರಕ ಶಿವಕುಮಾರ ಬೋಳಶೆಟ್ಟಿ ಮಾತನಾಡಿ, ಪತ್ರಿಕಾ ವಿತರಣೆಯ ಕಾರ್ಯ ಕೀಳೆಂದು ಭಾವಿಸಬಾರದು. ಇದು ಬೆಳೆಗ್ಗೆ ಅಥವಾ ಸಾಯಂಕಾಲ ಅರೆಕಾಲಿಕ ಕೆಲಸವಾಗಿದ್ದು, ಇದರಿಂದ ನಮ್ಮ ಕೆಲಸದ ಜೊತೆಗೆ ಮಾಡಬಹುದಾಗಿದೆ. ಇದರಿಂದ ಆರ್ಥಿಕ ಸಹಾಯವಾಗುತ್ತದೆ. ನಾನು ಕಳೆದ 22 ವರ್ಷಗಳಿಂದ ಇದೇ ಕಾರ್ಯವನ್ನು ಮಾಡುತ್ತಿದ್ದೇನೆ. ಈ ಕಾರ್ಯದ ಬಗ್ಗೆ ನನಗೆ ತೃಪ್ತಿಯಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಬಳಗದ ಅಧ್ಯಕ್ಷ ಹಾಗೂ ಉಪನ್ಯಾಸಕ ಎಚ್.ಬಿ.ಪಾಟೀಲ, ಪತ್ರಿಕಾ ವಿತರಣಾ ಕಾರ್ಯ ಲಾಭದ ಉದ್ದೇಶದಿಂದಲ್ಲ. ಅದರಲ್ಲಿ ಸಮಾಜ ಸೇವಾ ಮನೋಭಾವನೆ ಅಡಗಿದೆ. ವಿತರಕರು ಪತ್ರಿಕೆಯ ಸೇನಾನಿಗಳು. ಜ್ಞಾನ ಪ್ರಸರಣ ಕಾರ್ಯ ಮಾಡುತ್ತಾರೆ. ತಮ್ಮ ವೈಯಕ್ತಿಕ ಜೀವನವನ್ನು ಬದಿಗೊತ್ತಿ ದಿನಾಲೂ ಜ್ಞಾನ ದಾಸೋಹ ಕಾರ್ಯ ಮಾಡುತ್ತಾರೆ. ಅವರ ಕೆಲಸಕ್ಕೆ ಸೂಕ್ತ ಗೌರವ ದೊರೆಯಬೇಕು. ಅವರಿಗೆ ದೊರೆಯಬೇಕಾದ ಎಲ್ಲಾ ಸೌಲಭ್ಯಗಳನ್ನು ನೀಡಿ ಪತ್ರಿಕಾ ವಿತರಕರ ಜೀವನಕ್ಕೆ ಭದ್ರತೆಯನ್ನು ಒದಗಿಸಬೇಕು ಎಂದು ನುಡಿದರು.

ಕಾರ್ಯಕ್ರಮದಲ್ಲಿ ಪತ್ರಿಕಾ ವಿತರಕ ಶಶಿಕಾಂತ ಪಾಟೀಲ್, ಸಂಸ್ಥೆಯ ಅಧ್ಯಕ್ಷ ಚನ್ನಬಸಪ್ಪ ಗಾರಂಪಳ್ಳಿ, ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಮುಖ್ಯ ಶಿಕ್ಷಕಿ ಸಂಗೀತಾ ಸಾಲಿ, ಸೇವಕಿಯರಾದ ಸುನಿತಾ, ವಿದ್ಯಾರ್ಥಿ ಪ್ರತಿನಿಧಿ ಅದಿತಿ ಸೇರಿದಂತೆ ಇನ್ನಿತರರಿದ್ದರು.

# ನೇಣು ಹಾಕಿಕೊಂಡು ಯುವತಿ ಆತ್ಮಹತ್ಯೆ

**ಕಲಬುರಗಿ,ಸೆ.5–**ನೇಣು ಹಾಕಿಕೊಂಡು ಯುವತಿಯೊಬ್ಬಳು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮಾಲಗತ್ತಿ ರಸ್ತೆಯ ಸೋನಿಯಾಗಾಂಧಿ ಕಾಲೋನಿಯಲ್ಲಿ ನಡೆದಿದೆ.

ಆಮೀನಾ ಮೇಹರಿನ್ ತಂದೆ ಅಲಿಸಾಬ್ (18) ಆತ್ಮಹತ್ಯೆ ಮಾಡಿಕೊಂಡವರು.

ಸಿಟ್ಟಿನ ಸ್ವಭಾವದವಳಾಗಿದ್ದ ಆಮೀನಾ ಮೇಹರಿನ್ ಆಗಾಗ ಸಣ್ಣಪುಟ್ಟ ವಿಚಾರಕ್ಕೆ ಸಿಟ್ಟು ಮಾಡಿಕೊಂಡು ಒಬ್ಬಂಟಿಯಾಗಿ ಮನೆಯ ಕೊಂಡಿ ಹಾಕಿಕೊಂಡು ರೂಮಿನಲ್ಲಿ ಇರುತ್ತಿದ್ದಳು. ಸೆ.3 ರಂದು ಮನೆಯಲ್ಲಿ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಳ್ಳಲು ಯತ್ನಿಸಿದ್ದು, ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಸೆ.4 ರಂದು ಬೆಳಿಗ್ಗೆ ಮೃತಪಟ್ಟಿದ್ದಾಳೆ ಎಂದು ಮೃತಳ ತಂದೆ ಅಲಿಸಾಬ್ ಅವರು ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಸಲ್ಲಿಸಿರುವ ದೂರಿನಲ್ಲಿ ತಿಳಿಸಿದ್ದಾರೆ. ವಿಶ್ವ ವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ವಿದ್ಯಾರಣ್ಯ ಪ್ರೌಢಶಾಲೆಯಲ್ಲಿ ಶಿಕ್ಷಕರ ದಿನಾಚರಣೆ



**ಬೀದರ್, ಸೆ. 05–** ಸರಸ್ವತಿ ಶಿಕ್ಷಣ ವಿಕಾಸ ಸಮಿತಿ ಸಂಚಾಲಿತ ಶ್ರೀ ವಿದ್ಯಾರಣ್ಯ ಪ್ರೌಢಶಾಲೆಯಲ್ಲಿ ಶಿಕ್ಷಕರ ದಿನಾಚರಣೆ ವಿಜೃಂಭಣೆಯಿಂದ ನೆರವೇರಿತು.

ಕಾರ್ಯಕ್ರಮದಲ್ಲಿ ಸಹ–ಶಿಕ್ಷಕರಾದ ಶ್ರೀ ಸುರೇಂದ್ರ ಕಾಳೆಕರರು ಮಾತನಾಡಿ "ಶಿಕ್ಷಕ ಎಂಬ ಪದವೇ ವಿದ್ಯಾರ್ಥಿಗಳಿಂದ ಹುಟ್ಟಿದೆ. ವಿದ್ಯಾರ್ಥಿಗಳಿಲ್ಲದೆ ಶಿಕ್ಷಕ ಪದವಿಯೇ ಇರಲಿಲ್ಲ" ಎಂದು ತಿಳಿಸಿದರು. ಅವರು ಏಕಲವ್ಯ–ದ್ರೋಣಾಚಾರ್ಯರ ಕಥೆಯನ್ನು ಉದಾಹರಿಸಿ, ಶ್ರದ್ಧೆ, ಶಿಸ್ತು ಮತ್ತು ಸೇವಾಭಾವನೆ ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಂಡರೆ ಸಾಧನೆ ಸುಲಭ ಎಂದು ಸಲಹೆ ನೀಡಿದರು.


ವಿದ್ಯಾರ್ಥಿ ಪ್ರತಿನಿಧಿಯಾಗಿ 10ನೇ ತರಗತಿಯ ಭಗಿನಿ ವರಲಕ್ಷ್ಮೀ ವಸಂತ ಮಾತನಾಡಿ, ಡಾ. ರಾಧಾಕೃಷ್ಣನ್ ಅವರ ಹುಟ್ಟುಹಬ್ಬದ ನಿಮಿತ್ತ ಸೆಪ್ಟೆಂಬರ್ 5ರಂದು ಶಿಕ್ಷಕರ ದಿನಾಚರಣೆ ಆಚರಿಸಲಾಗುತ್ತದೆ ಎಂದು ತಿಳಿಸಿದರು. ರಾಧಾಕೃಷ್ಣನ್ ಅವರಿಗೆ ವಿದ್ಯಾರ್ಥಿಗಳು ತೋರಿದ ಗೌರವದ ಕತೆಯನ್ನು ನೆನೆದು, "ಶಿಕ್ಷಕರ ಬಗ್ಗೆ ಗೌರವ ಮತ್ತು ಭಕ್ತಿ ಭಾವನೆ ನಮ್ಮಲ್ಲಿ ಬೆಳೆಸಿಕೊಳ್ಳಬೇಕು" ಎಂದರು.

ಅಧ್ಯಕ್ಷರಾಗಿ ಮಾತನಾಡಿದ ಪ್ರೋ. ಎಸ್.ಬಿ. ಸಜ್ಜನಶೆಟ್ಟಿ ಅವರು, "ಶಿಕ್ಷಕರು ಶಾಶ್ವತ ವಿದ್ಯಾರ್ಥಿಗಳು. ಒಬ್ಬ ಉತ್ತಮ ಶಿಕ್ಷಕನು ಉತ್ತಮ ಸಮಾಜ ನಿರ್ಮಾಣಕ್ಕೆ ಕಾರಣನಾಗುತ್ತಾನೆ" ಎಂದು ಹೇಳಿದರು. ಅವರು ಗುರುಗಳಿಗೆ ರಾಷ್ಟ್ರಪತಿ, ಪ್ರಧಾನಮಂತ್ರಿಗಳಿಗಿಂತಲೂ ಶ್ರೇಷ್ಠ ಸ್ಥಾನವಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಹನುಮಂತರಾವ ಪಾಟೀಲ, ಉಪಾಧ್ಯಕ್ಷ ನಾಗೇಶ ಚಿನ್ನಾರೆಡ್ಡಿ, ಆಡಳಿತ ಮಂಡಳಿಯ ಸದಸ್ಯ ಶಿವಶರಣಪ್ಪ ಪಾಟೀಲ, ಆಡಳಿತಾಧಿಕಾರಿ ಬಂಡೆಪ್ಪ ಎಕ್ಲಾರೆ, ಮುಖ್ಯಗುರು ಪ್ರತಿಭಾ ಚಾಮಾ ಉಪಸ್ಥಿತರಿದ್ದರು.

ವಿದ್ಯಾರ್ಥಿನಿ ರಿತೀಕಾ ಸ್ವಾಗತ ಪರಿಚಯ ನೀಡಿದರೆ, ಐಶ್ವರ್ಯ ಮತ್ತು ಸಾಹಿತ್ಯ ಗೀತೆ ಹಾಡಿದರು. ಭಾಗ್ಯಶ್ರೀ ವಂದನಾರ್ಪಣೆ ಸಲ್ಲಿಸಿ, ಸುಪ್ರಿಯಾ ಕಾರ್ಯಕ್ರಮವನ್ನು ನಿರೂಪಿಸಿದರು.

# ಇಂದು ನಗರಕ್ಕೆ ವಚನ ಸಂಸ್ಕೃತಿ ಅಭಿಯಾನ ರಥ




**ಬಳ್ಳಾರಿ, ಸೆ.05–** ಶರಣ ಮತ್ತು ವಚನ ಸಂಸ್ಕೃತಿಯನ್ನು ಇಂದಿನ ಜನತೆಗೆ ತಿಳಿಸುವ ನಿಟ್ಟಿನಲ್ಲಿ ಜಾಗತಿಕ ಲಿಂಗಾಯತ ಮಹಾಸಭಾ ಹಮ್ಮಿಕೊಂಡಿರುವ ವಚನ ಸಂಸ್ಕೃತಿ ಅಭಿಯಾನದ ರಥ ನಾಳೆ ನಗರಕ್ಕೆ ಸೆ ಆಗಮಿಸಲಿದೆ.

ವಚನ ಸಾಹಿತ್ಯವನ್ನು ಸಂರಕ್ಷಿಸುವ ಮತ್ತು ಪಸರಿಸುವ ಉದ್ದೇಶದಿಂದ ಇದನ್ನು ಆಯೋಜಿಸಿದೆ.ಲಿಂಗಾಯತ ಮಠಾಧಿಪತಿಗಳ ಒಕ್ಕೂಟ. ಬಸವಲಿಂಗ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಬಾಲ್ಕಿ, ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠ, ಡಂಬಳ–ಗದಗ ನ ಡಾ. ಶ್ರೀ ತೋಂಟದ ಸಿದ್ಧರಾಮ ಸ್ವಾಮಿಗಳು ಮೊದಲಾದವರ ಸಾನಿದ್ಯದಲ್ಲಿ ಸಾಗುವ ಈ ಅಭಿಯಾನ ಸೆ.1 ರಂದು ವಿಜಾಪುರ ಜಿಲ್ಲೆಯ ಬಸವನ ಬಾಗೇವಾಡಿಯಿಂದ ಬಸವ ಸಂಸ್ಕೃತಿ ಅಭಿಯಾನ ಆರಂಭಗೊಂಡಿದ್ದು. ನಾಳೆ ಬಳ್ಳಾರಿಗೆ ಆಗಮಿಸಲಿದೆ. ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಸಂಚರಿಸಿ ಅಕ್ಟೋಬರ್ 5 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಸಮಾರೋಪಗೊಳ್ಳಲಿದೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H